## ಉಚಿತ ಮೈಕ್ರೋವೇವ್ ಅಬ್ಲೇಶನ್ ಶಿಬಿರ

ತುಮಕೂರು: ನಗರದ ಸಿದ್ದಗಂಗಾ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ರೇಡಿಯಾಲಜಿ ವಿಭಾಗದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 'ಉಚಿತ ಮೈಕ್ರೋವೇವ್ ಅಬ್ಲೇಶನ್' ಚಿಕಿತ್ಸಾ ಶಿಬಿರವು ಇಂದು ಯಶಸ್ವಿಯಾಗಿ ಆಯೋಜಿಸಲಾಗಿತ್ತು.

ಶಸ್ತ್ರಚಿಕಿತ್ಸೆಯಿಲ್ಲದೆ ಗೆಡ್ಡೆಗಳನ್ನು ಗುಣಪಡಿಸುವ ಅತ್ಯಾಧುನಿಕ ವೈದ್ಯಕೀಯ ತಂತ್ರಜ್ಞಾನವನ್ನು ಸಾರ್ವಜನಿಕರಿಗೆ ಪರಿಚಯಿಸುವ ಮತ್ತು ಬಡ ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡುವ ಉದ್ದೇಶದಿಂದ ಆಯೋಜಿಸಲಾಗಿದ್ದ ಶಿಬಿರವನ್ನು ಸಿದ್ಧಗಂಗಾ ವೈದ್ಯಕೀಯ ಮಹಾವಿದ್ಯಾಲಯದ ವೈದ್ಯಕೀಯ ಸೇವೆಗಳ ಕಾರ್ಯದರ್ಶಿ ಟಿ.ಎಂ.ಸ್ವಾಮಿ ಚಾಲನೆ ನೀಡಿದರು. ರಾಜ್ಯದ ವಿವಿಧ ಭಾಗಗಳಿಂದ ಬಂದಿದ್ದ 15 ಕ್ಕೂ ಹೆಚ್ಚು ಜನರು ಶಿಬಿರದ ಪ್ರಯೋಜನ ಪಡೆದುಕೊಂಡರು.ಸಿದ್ಧಗಂಗಾ ಮಠದ ಕಾರ್ಯನಿರ್ವಾಹಕ ನಿರ್ದೇಶಕರಾದ ಜಯವಿಭವ ಸ್ವಾಮಿ, ಮೆಡಿಕಲ್ ಕಾಲೇಜಿನ ಪ್ರಾಚಾರ್ಯರಾದ ಡಾ.ಶಾಲಿನಿ, ನಿರ್ದೇಶಕ ಡಾ.ಎಸ್.ಪರಮೇಶ್, ಸೇರಿದಂತೆ ಮತ್ತು ರೇಡಿಯಾಲಜಿ ವಿಭಾಗದ ತಜ್ಞ ವೈದ್ಯರು ಉಪಸ್ಥಿತರಿದ್ದರು.

## ಅಂಗವೈಕಲ್ಯವನ್ನು ಮೆಟ್ಟಿ ಸಾಧಿಸುತ್ತಿರುವ ವಿಶೇಷ ಚೇತನ ಪ್ರಕಾಶ್.ಆರ್

ಪ್ರಕಾಶ್ ಅವರು ತುಮಕೂರು ಡಿಸ್ಟ್ರಿಕ್ ದಿವ್ಯಂಗ ಸ್ಪೋರ್ಟ್ಸ್ ಅಕಾಡೆಮಿಯ ಸಂಸ್ಥಾಪಕರಾಗಿ ತುಮಕೂರು ಜಿಲ್ಲೆಯಲ್ಲಿ ಎಲ್ಲಾ ವಿಕಲಚೇತನರಿಗೆ ಕ್ರೀಡೆಯಲ್ಲಿ ಬೆಳೆಸುತ್ತಿರುವುದು ಶ್ಲಾಘನೀಯ ಇವರು ತಮ್ಮ ಅಕಾಡೆಮಿಯಲ್ಲಿ ವೀಲ್ ಚೇರ್ ಕ್ರಿಕೆಟ್ ವೀಲ್ ಚೇರ್ ಬಾಸ್ಕೆಟ್ ಬಾಲ್ ಸಿಟ್ಟಿಂಗ್ ತ್ರೋಬಾಲ್ ಎಲ್ಲಾ ಅಥ್ಲೆಟಿಕ್ಸ್ ಆಟಗಳನ್ನು ಅಭ್ಯಾಸ ಮಾಡಿಸುತ್ತಾರೆ. ಇಷ್ಟೇ ಅಲ್ಲದೆ ಈಗಾಗಲೇ ಇವರ ಅಕಾಡೆಮಿಯ ಮೂಲಕ ಐದಾರು ಆಟಗಾರರಿಗೆ ರಾಷ್ಟ್ರೀಯ ತಂಡದಲ್ಲಿ ಆಡುತ್ತಿದ್ದಾರೆ. ಆದರೆ ಇವರ ಪುಟಅಕಾಡೆಮಿಯನ್ನು ಗುರುತಿಸಿ ಕೆಲವು ಸಂಘ ಸಂಸ್ಥೆಗಳು ಸಣ್ಣಪುಟ್ಟ ಸಹಾಯ ಮಾಡುವ ಮೂಲಕ ಇವರನ್ನು ಪ್ರೋತ್ಸಾಹಿಸುತ್ತಿದೆ. ಇವರಿಗೆ ಸರ್ಕಾರದಿಂದ ಇನ್ನಷ್ಟು ಹೆಚ್ಚಿನ ನೆರವು ಸಿಕ್ಕರೆ ಮತ್ತಷ್ಟು ಸಾಧನೆ ಮಾಡಲು ದಾರಿ ಸಿಗುತ್ತದೆ. ಇವರನ್ನು ಮಾಜಿ ಕೌಶಲ್ಯಾಭಿವೃದ್ಧಿ ಅಧ್ಯಕ್ಷ ಮುರಳೀಧರ ಹಾಲಪ್ಪ ಅವರು ಅಭಿನಂದಿಸಿದರು. ಆದಿಲ್ ಪಾಷ ಮುಂತಾದವರಿದ್ದರು.

# ಚಿನ್ನದ ಪದಕ ಪಡೆದವರಿಗೆ 6 ಕೋಟಿ ರೂ.ನಗದು ಬಹುಮಾನ

# ಒಲಂಪಿಕ್ಸ್ ಕ್ರೀಡಾಕೂಟದಲ್ಲಿ ಕರ್ನಾಟಕದ ಕ್ರೀಡಾಪಟುಗಳು ಪದಕ ಗೆಲ್ಲುವ ವಿಶ್ವಾಸವಿದೆ– ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು: ಒಲಂಪಿಕ್ಸ್ ಕ್ರೀಡಾಕೂಟದಲ್ಲಿ ಚಿನ್ನದ ಪದಕ ಪಡೆದವರಿಗೆ 6 ಕೋಟಿ ರೂ.ನಗದು ಬಹುಮಾನ ಘೋಷಿಸಲಾಗಿದ್ದು, ಕರ್ನಾಟಕದ ಕ್ರೀಡಾಪಟುಗಳು ಚಿನ್ನದ ಪದಕ ಗೆಲ್ಲುವರೆಂಬ ವಿಶ್ವಾಸವಿದೆ ಎಂದು ತಿಳಿಸಿದರು.

ಅವರು ಇಂದು ಕರ್ನಾಟಕ ಒಲಂಪಿಕ್ಸ್ ಸಂಸ್ಥೆ ಬೆಂಗಳೂರು ಇವರ ವತಿಯಿಂದ ಕರ್ನಾಟಕ ಒಲಂಪಿಕ್ 2025 ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.ಕರ್ನಾಟಕ ಒಲಂಪಿಕ್ಸ್ ಸಂಸ್ಥೆ ವತಿಯಿಂದ ನೀಡಲಾಗುತ್ತಿರುವ ಕರ್ನಾಟಕ ಒಲಂಪಿಕ್ 2025 ಪ್ರಶಸ್ತಿಗೆ ಭಾಜನರಾಗಿರುವ ಕ್ರೀಡಾ ಸಾಧಕರಿಗೆ ಅಭಿನಂದಿಸಿದ ಮುಖ್ಯಮಂತ್ರಿಗಳು, 1958 ರಲ್ಲಿ ಪ್ರಾರಂಭವಾದ ಒಲಂಪಿಕ್ಸ್ ಸಂಸ್ಥೆ ಇಲ್ಲಿಯವರೆಗೆ ಕ್ರೀಡಾ ಕ್ಷೇತ್ರದ ಅಭಿವೃದ್ಧಿಗೆ ಕೊಡುಗೆ ನೀಡುತ್ತಾ ಬಂದಿದೆ. ವಿಧಾನ ಪರಿಷತ್ ಸದಸ್ಯರಾದ ಗೋವಿಂದರಾಜ್ ಅವರು ಸಂಸ್ಥೆಯ ಅಧ್ಯಕ್ಷತೆ ವಹಿಸಿಕೊಂಡ ನಂತರ ಸಂಸ್ಥೆಯು ಹೆಚ್ಚು ಕ್ರಿಯಾಶೀಲವಾಗಿದೆ. ನನ್ನ ಅವಧಿಯಲ್ಲಿಯೇ ಕರ್ನಾಟಕ ಒಲಂಪಿಕ್ಸ್ ಸಂಸ್ಥೆಯ ಕಟ್ಟಡಕ್ಕೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆಯನ್ನೂ ನಾನೇ ನೆರವೇರಿಸಿದ್ದೇನೆ. ಇಡೀ ದೇಶದಲ್ಲಿಯೇ ಆಂಧ್ರ ಮತ್ತು ಕೇರಳ ರಾಜ್ಯದಂತೆ ಕರ್ನಾಟಕದಲ್ಲಿಯೂ ಸಂಸ್ಥೆಯು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ. ಕರ್ನಾಟಕ ಒಲಂಪಿಕ್ಸ್ ಸಂಸ್ಥೆಯು ಎಲ್ಲಾ ಕ್ರೀಡೆಗಳಿಗೆ ಪ್ರೋತ್ಸಾಹ ನೀಡುತ್ತಿದೆ ಎಂದರು.



**ಕ್ರೀಡಾ ಕ್ಷೇತ್ರಕ್ಕೆ ಸರ್ಕಾರದ ಆದ್ಯತೆ:** ನಮ್ಮ ಸರ್ಕಾರ ಕ್ರೀಡಾ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡುತ್ತಿದೆ. ಒಲಂಪಿಕ್ಸ್ ಕ್ರೀಡಾಕೂಟದಲ್ಲಿ ಚಿನ್ನದಪದಕ ಗೆಲ್ಲುವ ರಾಜ್ಯದ ಕ್ರೀಡಾಪಟುಗಳಿಗೆ 6 ಕೋಟಿ ರೂ.ಗಳ ನಗದು ಬಹುಮಾನವನ್ನು ಘೋಷಿಸಲಾಗಿದೆ. ಅಂತೆಯೇ ಬೆಳ್ಳಿ ಪದಕ ಪಡೆದರೆ 4 ಕೋಟಿ ರೂ. ಹಾಗೂ ಕಂಚಿನ ಪದಕ ಗೆದ್ದರೆ 3 ಕೋಟಿ ರೂ. ನಗದು ಬಹುಮಾನವನ್ನು ಸರ್ಕಾರ ಘೋಷಿಸಿದೆ. ಕರ್ನಾಟಕದ ಕ್ರೀಡಾಪಟುಗಳಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಸರ್ಕಾರ ಈ ಕ್ರಮ ಕೈಗೊಂಡಿದೆ ಎಂದರು.

**ಕ್ರೀಡೆಯಲ್ಲಿ ಕ್ರೀಡಾಸ್ಪೂರ್ತಿ ಅವಶ್ಯಕ:** ಕಠಿಣ ಪರಿಶ್ರಮ ಹಾಗೂ ಗುರಿಸಾಧನೆ ಮಾಡುವ ಛಲವಿದ್ದರೆ, ಕರ್ನಾಟಕದ ಕ್ರೀಡಾಪಟು ಒಲಂಪಿಕ್ಸ್ ಕ್ರೀಡಾಕೂಟದಲ್ಲಿ ಪದಕ ಗೆಲ್ಲಬಹುದಾಗಿದೆ. ಕರ್ನಾಟಕದ ಕ್ರೀಡಾಪಟುಗಳು ಒಲಂಪಿಕ್ಸ್ ನಲ್ಲಿ ಚಿನ್ನದ ಪದಕ ಗೆಲ್ಲುವರೆಂಬ ವಿಶ್ವಾಸವಿದೆ. ಕ್ರೀಡೆಯಲ್ಲಿ ಕ್ರೀಡಾಸ್ಪೂರ್ತಿ ಅತ್ಯಂತ ಅವಶ್ಯಕ. ಗುರಿಸಾಧನೆಯೇ ಜೀವನದ ಧ್ಯೇಯವಾಗಬೇಕು ಎಂದರು.

**ಕ್ರೀಡಾ ಮೀಸಲಾತಿಯಡಿ ಸರ್ಕಾರಿ ಉದ್ಯೋಗ: ಜನವರಿ 2026 ರಲ್ಲಿ ಆದೇಶ:** ಕ್ರೀಡಾಪಟುಗಳಿಗೆ ಸರ್ಕಾರದ ನೇಮಕಾತಿಯಲ್ಲಿಯೂ ಮೀಸಲಾತಿಯನ್ನು ಒದಗಿಸಿದೆ. ಪೊಲೀಸ್ ಹಾಗೂ ಅರಣ್ಯ ಇಲಾಖೆಯಲ್ಲಿ ಶೇ. 3 ರಷ್ಟು ಹಾಗೂ ಇನ್ನುಳಿದ ಇಲಾಖೆಗಳಲ್ಲಿ ಶೇ. 2 ರಷ್ಟು ಕ್ರೀಡಾಪಟುಗಳಿಗೆ ಮೀಸಲಾತಿ ನೀಡಲಾಗುವುದು. ಜನವರಿಯಲ್ಲಿ ಕ್ರೀಡಾಮೀಸಲಾತಿಯಡಿಯಲ್ಲಿ ಸರ್ಕಾರಿ ಉದ್ಯೋಗದ ನೇಮಕಾತಿಗೆ ಸರ್ಕಾರಿ ಆದೇಶವನ್ನು ಹೊರಡಿಸಲಾಗುತ್ತದೆ. ಆದ್ದರಿಂದ ಹೆಚ್ಚಿನ ಯುವಜನರು ಕ್ರೀಡಾ ಕ್ಷೇತ್ರದಲ್ಲಿ ಭಾಗಿಯಾಗಬೇಕೆಂದು ತಿಳಿಸಿದರು.

# 50 ವರ್ಷ ತುಂಬಿದ ಕೋಲಾರ ಪತ್ರಿಕೆ ಅರ್ಧ ಶತಮಾನದ ಭಾರತದ ಚರಿತ್ರೆಗೆ ಮತ್ತು ವರ್ತಮಾನಕ್ಕೆ ಸಾಕ್ಷಿಯಾಗಿದೆ: ಕೆ.ವಿ.ಪ್ರಭಾಕರ್

## ಸುವರ್ಣ ಸಂಭ್ರಮ ವಿಶೇಷ ಸಂಚಿಕೆ ಜನಾರ್ಪಣೆ ಮಾಡಿದ ಕೆವಿಪಿ

ಕೋಲಾರ: 50 ವರ್ಷ ತುಂಬಿದ ಕೋಲಾರ ದಿನ ಪತ್ರಿಕೆ ಈ ಅರ್ಧ ಶತಮಾನದ ಭಾರತದ ಚರಿತ್ರೆಗೆ ಮತ್ತು ಈಗಿನ ವರ್ತಮಾನದ ನಡೆಗೂ ಸಾಕ್ಷಿಯಾಗಿದೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅಭಿಪ್ರಾಯಪಟ್ಟರು.

ಕೋಲಾರ ಪತ್ರಿಕೆ ಹೊರ ತಂದಿರುವ "ಸುವರ್ಣ ಸಂಭ್ರಮ" ವಿಶೇಷ ಸಂಚಿಕೆಯನ್ನು ಜನಾರ್ಪಣೆಗೊಳಿಸಿ, ಪತ್ರಿಕೆಯ ಜನಪರವಾದ ಹೆಜ್ಜೆಗುರುತುಗಳನ್ನು ಉಲ್ಲೇಖಿಸಿ ಮಾತನಾಡಿದರು.

1975 ಏಪ್ರಿಲ್ 5 ಕ್ಕೆ ಕೋಲಾರ ಪತ್ರಿಕೆಯ ಜನನ ಆಗತ್ತೆ. 1975ರ ಜೂನ್ 25 ಕ್ಕೆ ಇಂದಿರಾಗಾಂಧಿ ಅವರು ದೇಶದಲ್ಲಿ ತುರ್ತು ಪರಿಸ್ಥಿತಿ ಘೋಷಣೆ ಮಾಡ್ತಾರೆ. ಕೂಸು ಕಣ್ಣು ಬಿಟ್ಟು 2 ತಿಂಗಳಿಗೇ ತುರ್ತು ಪರಿಸ್ಥಿತಿಗೆ ತುತ್ತಾಗತ್ತೆ.

ತುರ್ತು ಪರಿಸ್ಥಿತಿಯನ್ನು ಜೀರ್ಣಿಸಿಕೊಂಡು ಕೋಲಾರ ಪತ್ರಿಕೆ ಮುನ್ನಡೆಯತ್ತೆ. ಪತ್ರಿಕೆಗೆ ಹತ್ತು ವರ್ಷ ತುಂಬುವ ಮೊದಲೇ ಇಂದಿರಾಗಾಂಧಿಯವರ ಹತ್ಯೆ ಆಗತ್ತೆ. 1984 ಅಕ್ಟೋಬರ್ 31 ರಂದು ಹತ್ಯೆ ಆಗತ್ತೆ. ಅದೇ ದಿನ ಕೋಲಾರ ಪತ್ರಿಕೆ ಇಂದಿರಾಗಾಂಧಿ ಅವರ ಬಗ್ಗೆ ವಿಶೇಷ ಸಂಚಿಕೆ ಹೊರತರತ್ತೆ. ಸಂಚಿಕೆ ಕೈಯಲ್ಲಿ ಹಿಡಿದ ಓದುಗರೆಲ್ಲರ ಕಣ್ಣುಗಳು ಒದ್ದೆ ಆಗತ್ತೆ ಎಂದು ಪತ್ರಿಕೆಯ ಮೊದಲ ದಶಕದ ನಡೆಯನ್ನು ಸ್ಮರಿಸಿದರು.

ಅವಿಭಜಿತ ಕೋಲಾರ ಜಿಲ್ಲೆಯ ಚರಿತ್ರೆ ಮಾತ್ರವಲ್ಲ ರಾಜ್ಯದ, ದೇಶದ 50 ವರ್ಷಗಳ ನಡೆಗೆ ಕನ್ನಡಿ ಹಿಡಿದ ಪತ್ರಿಕೆ ಶತಮಾನ ಪೂರೈಸಲಿ ಎಂದು ಆಶಿಸುತ್ತೇನೆ.

ಈ ಪತ್ರಿಕೆಯನ್ನು ಹಂಚುವ ಹುಡುಗನಾಗಿದ್ದ ನಾನು ಇಂದು ಇದೇ ಪತ್ರಿಕೆಯ "ಸುವರ್ಣ ಸಂಭ್ರಮ" ವಿಶೇಷ ಸಂಚಿಕೆಯನ್ನು ಬಿಡುಗಡೆಗೊಳಿಸುವ ಧನ್ಯತೆಗೆ ಪಾತ್ರನಾಗಿರುವ ಈ ಕ್ಷಣಕ್ಕೆ ನಾನು ಸದಾ ಋಣಿಯಾಗಿರುತ್ತೇನೆ ಎಂದರು.

ಕೋಲಾರ ಪತ್ರಿಕೆ ಅಕ್ಷರ ಲೋಕದ ಅಜ್ಜ. ಈ ಅಜ್ಜನ ಆಶೀರ್ವಾದದಿಂದ ಪತ್ರಕರ್ತನಾಗಿ ರೂಪುಗೊಂಡವನು ನಾನು. ನನ್ನ ಹಾಗೆ ಅದೆಷ್ಟು ಪತ್ರಕರ್ತರು ರೂಪುಗೊಂಡರೋ ಲೆಕ್ಕಕ್ಕಿಲ್ಲ. ವಿ.ಆರ್.ಸುದರ್ಶನ್ ಅವರು ಈ ವಿಶೇಷ ಸಂಚಿಕೆಗೆ ಬರೆದಿರುವ ತಮ್ಮ ಲೇಖನದಲ್ಲಿ ಇದನ್ನು ಉಲ್ಲೇಖಿಸಿದ್ದಾರೆ. "ಕೋಲಾರ ಪತ್ರಿಕೆ ಒಂದು ಟ್ರೈನಿಂಗ್ ಸೆಂಟರ್ ಆಗಿತ್ತು, ಹೊಸ ಹೊಸ ಪತ್ರಕರ್ತರನ್ನು ರೂಪಿಸುವ ಕಾರ್ಖಾನೆ ಎಂದು ಬರೆದಿದ್ದಾರೆ. ಇದು ಅಕ್ಷರಶಃ ಸತ್ಯ. ಕೋಲಾರ ಪತ್ರಿಕೆಯ ಗರಡಿ ಮನೆಯಲ್ಲಿ ಅಕ್ಷರ ಸಾಕ್ಷಾತ್ಕಾರ ಪಡೆದವರು ಎಲ್ಲಾ ರಾಜ್ಯ ಮಟ್ಟದ ಪತ್ರಿಕೆಗಳಲ್ಲೂ ವೃತ್ತಿಪರತೆ ಪಾಲಿಸುತ್ತಿದ್ದಾರೆ ಎಂದರು.

"ಹಿಂದಣ ಹೆಜ್ಜೆಯನರಿಯದವನು ಮುಂದಣ ಹೆಜ್ಜೆ ಇಡಲಾರನು" ಎನ್ನುವ ಮಾತೊಂದಿದೆ. ಈ ಮಾತಿನಂತೆ ಹೇಳಬಹುದಾದರೆ ಅವಿಭಜಿತ ಕೋಲಾರ ಜಿಲ್ಲೆಯ ಅರ್ಧ ಶತಮಾನದ ನಡೆಯನ್ನು ಇವತ್ತಿನ ವರ್ತಮಾನದ ಓದುಗರಿಗೆ ದಾಟಿಸುವ ಅದ್ಭುತ ಪ್ರಯತ್ನವನ್ನು ಸುವರ್ಣ ಸಂಚಿಕೆ ಮೂಲಕ ಮಾಡಿದ್ದಾರೆ.

ಉದಾಹರಣೆಗೆ ಹೇಳೋದಾದರೆ, "ಕೋಲಾರ ಜಿಲ್ಲೆಯ ಪ್ರಾಚೀನ ಶಿಲಾ ಸಮಾಧಿಗಳ ಬಗ್ಗೆ ಪಿ.ಚಂದ್ರಪ್ರಕಾಶ್ ಅವರು ಬರೆದಿರುವ ಲೇಖನ ನನಗೆ ಅತ್ಯಂತ ಬೆರಗು ಹುಟ್ಟಿಸಿತು. ಇವರು ತಮ್ಮ ಲೇಖನದಲ್ಲಿ, "ಕಲ್ಲು ಗಣಿಗಾರಿಕೆಯಿಂದಾಗಿ ಟೇಕಲ್–ತಲಗುಂದ–ಧನಮಟ್ನಳ್ಳಿ–ಕೆಂದಟ್ಟಿ–ಗರುಡನ ಹಳ್ಳಿ ಗಳಲ್ಲಿ ಇದ್ದ ಶಿಲಾಸಮಾಧಿಗಳು ನಾಶ ಆಗಿರುವುದನ್ನು ಉಲ್ಲೇಖಿಸಿದ್ದಾರೆ. ಇವೆಲ್ಲಾ ನಾನು ಆಡಿ ಬೆಳೆದ ಜಾಗಗಳು. ಇಲ್ಲಿ ಶಿಲಾಸಮಾಧಿಗಳು ಇದ್ದವು ಎನ್ನುವುದೇ ನನಗೆ ಗೊತ್ತಿರಲಿಲ್ಲ ಎಂದರು.

ವಿಜ್ಞಾನದ ಬಗ್ಗೆ ಮೊದಲಿಗೆ ಅಂಕಣ ಆರಂಭಿಸಿದ ಶ್ರೇಯಸ್ಸು ಕೋಲಾರ ಪತ್ರಿಕೆಗೆ ಸಲ್ಲುತ್ತದೆ. ಇದರ ಜೊತೆಗೆ ಕಾನೂನು ತಿಳುವಳಿಕೆ ಸೇರಿ ನಿತ್ಯ ಬದುಕನ್ನು ಆವರಿಸಿರುವ ಎಲ್ಲಾ ವಲಯಗಳ ಬಗ್ಗೆಯೂ ಅರ್ಥಪೂರ್ಣ ಅಂಕಣಗಳನ್ನು ಬರೆಸುವ ಮೂಲಕ ಪ್ರಹ್ಲಾದ ರಾಯರು ಅವಿಭಜಿತ ಕೋಲಾರ ಜಿಲ್ಲೆಯ ವಿವೇಕವನ್ನು ನಿರಂತರ ತಿದ್ದುತ್ತಾ, ವಿಸ್ತರಿಸುತ್ತಾ ಬಂದಿದ್ದರು. ಈಗ ಆ ಸಾರ್ಥಕ ಕೆಲಸವನ್ನು ಸುಹಾಸ್ ಪ್ರಹ್ಲಾದ್ ರಾವ್ ಅವರು ಮುಂದುವರೆಸಿದ್ದಾರೆ.

ಈ ವಿಶೇಷ ಸಂಚಿಕೆಯಲ್ಲೂ ಕೋಲಾರದ ಪ್ರಾಗೈತಿಹಾಸ, ಶಾಸನಗಳು,ಮಣ್ಣಿನ ಗುಣ, ಪ್ರಾಕೃತಿಕ ಸೊಬಗು, ರಾಜಕಾರಣ, ಸಂಸ್ಕೃತಿ ಮತ್ತು ಆರ್ಥಿಕತೆಯ ಪ್ರಗತಿಯನ್ನು ದಾಖಲಿಸಲಾಗಿದೆ. ಕೇವಲ ಜಾಹಿರಾತಿಗಾಗಿ ವಿಶೇಷ ಸಂಚಿಕೆಯನ್ನು ಮಾಡುವವರೂ ಇದ್ದಾರೆ. ಆದರೆ ಕೋಲಾರ ಪತ್ರಿಕೆ ಸಂಗ್ರಹಯೋಗ್ಯವಾದ ವಿಶೇಷ ಸಂಚಿಕೆಯನ್ನು ರೂಪಿಸಿದೆ ಎಂದರು.

ಈ ಸುವರ್ಣ ಸಂಭ್ರಮ ಮಾತ್ರವಲ್ಲ, 1976 ರಲ್ಲೇ ಮೊದಲ ವಾರ್ಷಿಕೋತ್ಸವ ಸಂದರ್ಭದಲ್ಲಿ ಹೊರತಂದಿದ್ದ "ಶೃಂಗ" ವಿಶೇಷ ಸಂಚಿಕೆಯಿಂದ ಹಿಡಿದು ಇವತ್ತಿನ ಸುವರ್ಣ ಸಂಭ್ರಮದವರೆಗೂ ಪ್ರತೀ ವಿಶೇಷ ಸಂಚಿಕೆಗಳೂ ಸಂಗ್ರಹಯೋಗ್ಯವಾಗಿವೆ. ತಮಿಳು–ತೆಲುಗು ಮಾತಾಡುವವರೇ ಹೆಚ್ಚಾಗಿದ್ದ ಜಿಲ್ಲೆಯಲ್ಲಿ ಕನ್ನಡ ನೆಲ–ಜಲ–ಭಾಷೆ–ಸಂಸ್ಕೃತಿಯನ್ನು ಕಟ್ಟುವ ಕನಸು ಮತ್ತು ಕಾಳಜಿಯ ಜೊತೆಗೆ ಹುಟ್ಟಿದ ಕೋಲಾರ ಪತ್ರಿಕೆ ತನ್ನ ಕನಸನ್ನು ನನಸು ಮಾಡಿಕೊಂಡಿದೆ. ಕಾಳಜಿಯನ್ನು ಸಾಕಾರಗೊಳಿಸಿಕೊಂಡಿದೆ ಎಂದರು.

## ಆರ್‌ಟಿಇ ತಂತ್ರಾಂಶ ಬಿಡುಗಡೆ

ತುಮಕೂರು: ಖಾಸಗಿ ಶಾಲಾ ಆಡಳಿತ ಮಂಡಳಿಗಳು 2024–25ನೇ ಸಾಲಿಗಿಂತ ಹಿಂದಿನ ಹಾಗೂ 2025–26ನೇ ಸಾಲಿನ ಆರ್‌ಟಿಇ ಶುಲ್ಕ ಮರುಪಾವತಿಗೆ ಪ್ರಸ್ತಾವನೆ ಸಲ್ಲಿಸಲು ಆರ್‌ಟಿಇ ತಂತ್ರಾಂಶವನ್ನು ಬಿಡುಗಡೆ ಮಾಡಲಾಗಿದೆ.

ಖಾಸಗಿ ಶಾಲಾ ಆಡಳಿತ ಮಂಡಳಿಯವರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ತುಮಕೂರು ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಹನುಮಂತಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿರಿಧಾನ್ಯ ಪಾಕ ಸ್ಪರ್ಧೆಗೆ ಅರ್ಜಿ ಆಹ್ವಾನ

ತುಮಕೂರು: ಕೃಷಿ ಇಲಾಖೆಯು ಸಿರಿಧಾನ್ಯ ಮತ್ತು ಸಾವಯವ ಅಂತರಾಷ್ಟ್ರೀಯ ವಾಣಿಜ್ಯ ಮೇಳ–2025ರ ಪ್ರಯುಕ್ತ ಡಿಸೆಂಬರ್ 31ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆಯನ್ನು ಏರ್ಪಡಿಸಿದ್ದು, ಸ್ಪರ್ಧೆಯಲ್ಲಿ ಭಾಗವಹಿಸಲಿಚ್ಚಿಸುವವರಿಂದ ಅರ್ಜಿ ಆಹ್ವಾನಿಸಿದೆ.

ಈ ಸ್ಪರ್ಧೆಯಲ್ಲಿ ಕೃಷಿ ಇಲಾಖೆ ಅಧಿಕಾರಿ/ಸಿಬ್ಬಂದಿ, ವಿದ್ಯಾರ್ಥಿಗಳನ್ನು ಹೊರತುಪಡಿಸಿ ಸಾರ್ವಜನಿಕರು ಭಾಗವಹಿಸಬಹುದಾಗಿದ್ದು, ಭಾಗವಹಿಸುವವರು ತಮ್ಮ ಅರ್ಜಿಯಲ್ಲಿ ಹೆಸರು, ವಿಳಾಸ ಮತ್ತು ತಯಾರಿಸುವ ಖಾದ್ಯದ ಬಗ್ಗೆ ಮಾಹಿತಿ ನೀಡಬೇಕು. ಅರ್ಜಿ ನಮೂದಿಸಿದ ತಿನಿಸನ್ನು ಮನೆಯಲ್ಲಿಯೇ ತಯಾರಿಸಿ ಡಿಸೆಂಬರ್ 31ರಂದು ಜಂಟಿ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಬೆಳಿಗ್ಗೆ 11 ಗಂಟೆಗೆ ಪ್ರದರ್ಶಿಸಬೇಕು.

ಸ್ಪರ್ಧೆಯಲ್ಲಿ ಭಾಗವಹಿಸುವ ಪ್ರತಿ ಸ್ಪರ್ಧಿಗೆ ಒಂದೇ ಸಸ್ಯಹಾರಿ ತಿನಿಸು(ಸಿಹಿ ಅಥವಾ ಖಾರ ಅಥವಾ ಮರೆತು ಹೋದ ಖಾದ್ಯ) ಪ್ರದರ್ಶಿಸಲು ಅವಕಾಶವಿರುತ್ತದೆ. ಸ್ಪರ್ಧೆಯಲ್ಲಿ ಆಯ್ಕೆಯಾದವರಿಗೆ ಸಿಹಿ, ಖಾರ (ಸಿರಿಧಾನ್ಯ ಖಾದ್ಯಗಳಿಗೆ ಮಾತ್ರ) ಮತ್ತು ಮರೆತು ಹೋದ ಖಾದ್ಯಗಳ ತಿನಿಸಿಗೆ ಜಿಲ್ಲಾ ಮಟ್ಟದಲ್ಲಿ ಕ್ರಮವಾಗಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನವಾಗಿ ತಲಾ 5,000ರೂ., 3,000ರೂ. ಹಾಗೂ 2,000ರೂ.ಗಳನ್ನು ನೀಡಲಾಗುವುದು.

# ಜೀವದ ತೊಟ್ಟಿಲು ಭೂಮಿ ಬಂಜೆಯಾಗದಿರಲಿ: ಕಬ್ಬು ಬೆಳೆಯುವ ಪ್ರದೇಶದಲ್ಲಿ ಮಣ್ಣಿನ ಆರೋಗ್ಯ, ನೀರಿನ ಸಮಗ್ರ ನಿರ್ವಹಣೆ ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ

## ತಂತ್ರಜ್ಞಾನ ಅಳವಡಿಸಿಕೊಳ್ಳುವುದರ ಮೂಲಕ ಉತ್ತಮ ಇಳುವರಿ ಜೊತೆಗೆ ಹೆಚ್ಚಿನ ಆದಾಯ ಪಡೆಯಲು ಮುಂದಾಗಿ

ಬೆಳಗಾವಿ: ರಾಜ್ಯ ಸರ್ಕಾರ ರೈತ ಪರ ಸರಕಾರವಾಗಿದ್ದು, ಕಬ್ಬು ಬೆಳೆಯುವ ಪ್ರದೇಶದಲ್ಲಿ ಮಣ್ಣಿನ ಆರೋಗ್ಯ ಮತ್ತು ನೀರಿನ ಸಮಗ್ರ ನಿರ್ವಹಣೆಗೆ ಹೆಚ್ಚು ಒತ್ತು ನೀಡಲಾಗುತ್ತಿದೆ. ಭೂಮಿ ಜೀವದ ತೊಟ್ಟಿಲು, ಇಂತಹ ಜೀವದ ತೊಟ್ಟಿಲನ್ನು ಬಂಜೆ ಮಾಡಬಾರದು ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.

ಬೆಳಗಾವಿ ತಾಲೂಕಿನ ಹುದಲಿ ಗ್ರಾಮದಲ್ಲಿನ ಬೆಳಗಾಂ ಶುಗರ್ಸ ಹತ್ತಿರ ಖಾಸಗಿ ಜಮೀನಿನಲ್ಲಿ ಜಿಲ್ಲಾಡಳಿತ, ಜಿಲ್ಲಾಪಂಚಾಯತ್ ಬೆಳಗಾವಿ, ಕೃಷಿ ಇಲಾಖೆ ಹಾಗೂ ಸಕ್ಕರೆ ಕಾರ್ಖಾನೆಗಳ ಸಂಯುಕ್ತ ಆಶ್ರಯದಲ್ಲಿ ಶನಿವಾರ ಜರುಗಿದ ಬೆಳಗಾವಿ, ಬಾಗಲಕೋಟ, ವಿಜಯಪುರ, ಕಲಬುರಗಿ ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಕಬ್ಬು ಬೆಳೆಯುವ ಪ್ರದೇಶದಲ್ಲಿ ಮಣ್ಣಿನ ಆರೋಗ್ಯ ಮತ್ತು ನೀರಿನ ಸಮಗ್ರ ನಿರ್ವಹಣೆ ಯೋಜನೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ರೈತರು ರಸಗೊಬ್ಬರ ಬಳಕೆಯನ್ನು ಕಡಿಮೆ ಮಾಡಬೇಕಾಗಿದೆ. ರಸಗೊಬ್ಬರ ಬಳಕೆಯಿಂದ ಹೆಚ್ಚಿನ ಇಳುವರಿ ಬರುತ್ತದೆ ಎಂಬ ತಪ್ಪು ಕಲ್ಪನೆಯಿಂದ ಹೊರಬರಬೇಕಾಗಿದೆ. ಭಾರತ ಕೃಷಿ ಪ್ರಧಾನ ರಾಷ್ಟವಾಗಿದ್ದು ಪ್ರತಿಶತ 90 ಕೃಷಿ ಮೇಲೆಯೇ ಅವಲಂಬಿತವಾಗಿದೆ. ರೈತರಿಗೆ ಬೇಕಾದ ಸಹಾಯ ಮಾಡುವುದು ಸರಕಾರಗಳ ಜವಾಬ್ದಾರಿಯಾಗಿದೆ ಎಂದರು.

ನೀರಿನ ನಿರ್ವಹಣೆ ಕುರಿತು ಪ್ರತಿಯೊಬ್ಬರು ತಿಳಿದುಕೊಂಡು ನೀರನ್ನು ಮಿತವಾಗಿ ಬಳಸಬೇಕು. ಈ ಕುರಿತು ಕೃಷಿ ಇಲಾಖೆ ಪ್ರತಿ ರೈತರ ಹತ್ತಿರ ಹೋಗಿ ಇಲಾಖೆಯಿಂದ ಪರಿಚಯಿಸಲಾಗುವ ಹೊಸ ತಳಿಗಳ ಕುರಿತು ಮಾಹಿತಿ ನೀಡಬೇಕು. ಕಳೆದ ಆಯವ್ಯಯಲ್ಲಿ ಘೋಷಿಸಿದಂತೆ ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿದೆಎಂದು ತಿಳಿಸಿದರು.

ರೈತರು ಕೃಷಿಯಲ್ಲಿ ತಂತ್ರಜ್ಞಾನ ಅಳವಡಿಸಿಕೊಳ್ಳುವುದರ ಮೂಲಕ ಉತ್ತಮ ಇಳುವರಿ ಜೊತೆಗೆ ಹೆಚ್ಚಿನ ಆದಾಯ ಪಡೆಯಲು ಮುಂದಾಗಬೇಕು. ಈ ನಿಟ್ಟಿನಲ್ಲಿ ರಾಜ್ಯ ಸರಕಾರವು ಸಬ್ಸಿಡಿ ಮೂಲಕ ಹೊಸ ಯಂತ್ರೋಪಕರಣಗಳನ್ನು ವಿತರಿಸುತ್ತಿದೆ. ರಾಜ್ಯದಲ್ಲಿಯೇ ಮಂಡ್ಯ ಜಿಲ್ಲೆಯಲ್ಲಿ ಹೆಚ್ಚು ವ್ಯವಸಾಯ ಮಾಡಲಾಗುತ್ತಿದೆ. ಅಲ್ಲಿನ ರೈತರು ಕೃಷಿ ಇಲಾಖೆಯಿಂದ ಜಾರಿಯಲ್ಲಿರುವ ಸಾಕಷ್ಟು ಯೋಜನೆಗಳನ್ನು ಪಡೆದು ಅಭಿವೃದ್ಧಿಪರ ಕೃಷಿ ಮಾಡುತ್ತಿದ್ದಾರೆ. ಕೃಷಿ ಇಲಾಖೆ ಅಧಿಕಾರಿ, ಸಿಬ್ಬಂದಿಗಳು ಕ್ಷೇತ್ರಗಳಿಗೆ ಭೇಟಿ ನೀಡಿ ರೈತರಿಗೆ ಹೊಸ ಹೊಸ ತಂತ್ರಜ್ಞಾನ ಬಳಕೆ, ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳುವ ಕುರಿತು ಜಾಗೃತಿ ಮೂಡಿಸಬೇಕು. ಕೃಷಿಯನ್ನು ಲಾಭದಾಯಕವ್ನಾಗಿಸಿ ರೈತರನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿಸಲು ರಾಜ್ಯ ಸರಕಾರ ಸದಾ ಬದ್ಧವಾಗಿದೆ ಎಂದು ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ಹೇಳಿದರು.

ಕೃಷಿಸಚಿವರಾದ ಎನ್.ಚಲುವರಾಯಸ್ವಾಮಿ ಅವರು ಮಾತನಾಡಿ, ರಾಜ್ಯದ ಕಬ್ಬು ಬೆಳೆಗಾರರಿಗೆ ಅನುಕೂಲವಾಗಬೇಕು. ಬೆಳೆಯಲ್ಲಿ ಆಧುನಿಕ ತಂತ್ರಜ್ಞಾನ ಬಳಸಿಕೊಳ್ಳುವುದರ ಮೂಲಕ ಉತ್ತಮ ಆದಾಯ ಪಡೆಯಬೇಕೆನ್ನುವ ಉದ್ದೇಶದಿಂದ ಕಬ್ಬು ಬೆಳೆಯುವ ಪ್ರದೇಶದಲ್ಲಿ ಮಣ್ಣಿನ ಆರೋಗ್ಯ, ನೀರಿನ ಸಮಗ್ರ ನಿರ್ವಹಣೆ ಯೋಜನೆಯನ್ನು ಜಾರಿಗೊಳಿಸಲಾಗಿದೆ.

ರೈತರಿಗೆ ಅನುಕೂಲವಾಗುವ ಎಲ್ಲ ಯೋಜನೆಗಳನ್ನು ನೀಡುವ ಮೂಲಕ ರೈತರಿಗೆ ಬೆಂಬಲಿಸುವ ಕಾರ್ಯ ಸಿದ್ಧರಾಮಯ್ಯನವರ ನೇತೃತ್ವದ ನಮ್ಮ ಸರಕಾರ ಮಾಡುತ್ತಿದೆ. ಕಡಿಮೆ ನೀರು, ಖರ್ಚಿನಲ್ಲಿ ಉತ್ತಮ ಇಳುವರಿ ತೆಗೆಯಬಹುದಾದ ತಳಿಗಳನ್ನು ಪರಿಚಯಿಸುವುದರ ಮೂಲಕ ರೈತರು ಉತ್ತಮ ಆದಾಯ ಪಡೆಯಬಹುದಾದ ಕಾರ್ಯಕ್ರಮ ರೂಪಿಸಲಾಗಿದೆ.

ಕಬ್ಬು ಕಟಾವು ಯಂತ್ರಗಳನ್ನು ಸಬ್ಸಿಡಿ ಮೂಲಕ ವಿತರಿಸುತ್ತಿರುವುದು ರಾಷ್ಟ್ರಕ್ಕೆ ಮಾದರಿಯಾಗಿದೆ. ಇಂತಹ ಯೋಜನೆಗಳ ಮೂಲಕ ಕೃಷಿ ಕಾರ್ಮಿಕರ ಕೊರತೆ ನೀಗಿಸುವುದರ ಜೊತೆಗೆ ಉತ್ತಮ ಆದಾಯ ಪಡೆಯಬಹುದಾಗಿದೆ ಎಂದು ಚಲುವರಾಯಸ್ವಾಮಿ ಹೇಳಿದರು.

ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು, ರಾಜ್ಯ ಸರಕಾರವು ರೈತರು ವೈಜ್ಞಾನಿಕ ಪದ್ದತಿಯನ್ನು ಅಳವಡಿಸಿಕೊಳ್ಳುವ ಮೂಲಕ ದುಪ್ಪಟ್ಟು ಆದಾಯ ಪಡೆಯಲು ಅನುಕೂಲವಾಗುವಂತೆ ಸರಕಾರ ಅನೇಕ ಯೋಜನೆ ಹಾಗೂ ಸೌಲಭ್ಯಗಳನ್ನು ನೀಡುವುದರ ಮೂಲಕ ಕೃಷಿ ಕ್ಷೇತ್ರದಲ್ಲಿ ಬದಲಾವಣೆಯನ್ನು ತರಲಾಗಿದೆ ಎಂದು ತಿಳಿಸಿದರು.

ಬೇರೆ ರಾಷ್ಟಗಳಲ್ಲಿ ಕಡಿಮೆ ಭೂಮಿಯಲ್ಲಿ ಉತ್ತಮ ಇಳುವರಿ ಪಡೆಯುತ್ತಿದ್ದು, ಅದೇ ರೀತಿ ನಮ್ಮ ರೈತರ ಭೂಮಿಯಲ್ಲಿಯೂ ವೈಜ್ಞಾನಿಕ ಕೃಷಿ ಪದ್ಧತಿ ಅಳವಡಿಸಿಕೊಂಡು ಉತ್ತಮ ಆದಾಯ ಪಡೆಯುವುದರ ಮೂಲಕ ಸ್ವಾವಲಂಬಿಗಳಾಗಬೇಕು ಎನ್ನುವುದು ರಾಜ್ಯ ಸರಕಾರದ ಮಹತ್ವಾಕಾಂಕ್ಷೆಯಾಗಿದೆ. ಈ ನಿಟ್ಟಿನಲ್ಲಿ ಸರಕಾರವು ಅನೇಕ ಯೋಜನೆಗಳನ್ನು ಜಾರಿಗೊಳಿಸಿದ್ದು ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಚಿವ ಜಾರಕಿಹೊಳಿ ಕರೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ ಅವರು ಮಾತನಾಡಿ, ಕಾಲ ಬದಲಾದಂತೆ ರೈತರು ಕೂಡ ಕೃಷಿಯಲ್ಲಿ ಬದಲಾವಣೆ ತಂದುಕೊಳ್ಳಬೇಕು. ಈ ನಿಟ್ಟಿನಲ್ಲಿ ಸರಕಾರದಿಂದ ಅನೇಕ ಸೌಲಭ್ಯಗಳನ್ನು ನೀಡುತ್ತಿದ್ದು ರೈತರು ಇದರ ಸದುಪಯೋಗ ಪಡೆದು ಕೊಂಡು ಉತ್ತಮ ಇಳುವರಿ ಹಾಗೂ ಆದಾಯ ಪಡೆದುಕೊಳ್ಳಬೇಕು. ರೈತರಿಗೆ ಇರುವಂತಹ ಸೌಲಭ್ಯ ಹಾಗೂ ಯೋಜನೆಗಳ ಕುರಿತು ಹಳ್ಳಿ ಹಳ್ಳಿಗಳಿಗೆ ಭೇಟಿ ನೀಡಿ ಮಾಹಿತಿ ನೀಡುವ ಕಾರ್ಯ ಅಧಿಕಾರಿಗಳಿಂದ ಆಗಬೇಕು ಎಂದರು.

ಸಕ್ಕರೆ ಸಚಿವರಾದ ಶಿವಾನಂದ ಪಾಟೀಲ ಅವರು, ದೇಶದಲ್ಲಿ ನಾಲ್ಕು ನೂರಕ್ಕೂ ಹೆಚ್ಚು ಸಕ್ಕರೆ ಕಾರ್ಖಾನೆಗಳಿದ್ದು, ಅಂದಾಜು ಐದು ಕೋಟಿಗಿಂತ ಅಧಿಕ ಜನರು ಕಬ್ಬು ಬೆಳೆಯುತ್ತಿದ್ದಾರೆ. ರೈತರು ಬೆಳೆದ ಬೆಳೆಗೆ ಯೋಗ್ಯ ದರ ದೊರಕದಿದ್ದರೆ ಅನಾನುಕೂಲವಾಗುತ್ತದೆ. ಆದ್ದರಿಂದ ಉತ್ತಮ ದರ ಒದಗಿಸುವ ಪ್ರಯತ್ನ ನಿರಂತರವಾಗಿ ನಡೆಯುತ್ತಿದೆ ಎಂದರು.

ದೇಶದಲ್ಲಿ ಉತ್ತರಪ್ರದೇಶ, ಮಹಾರಾಷ್ಟ್ರ ಹಾಗೂ ಕರ್ನಾಟಕ ಈ ಮೂರು ರಾಜ್ಯಗಳು ಅತೀ ಹೆಚ್ಚು ಸಕ್ಕರೆ ಉತ್ಪಾದಿಸುತ್ತಿವೆ. ಇಲ್ಲಿ ಉತ್ಪಾದಿಸಲಾಗುವ ಸಕ್ಕರೆಗೆ ಆಂತರಿಕ ಮಾರುಕಟ್ಟೆಗಿಂತ ಹೊರ ರಾಷ್ಟಗಳಿಗೆ ಸಕ್ಕರೆ ರಫ್ತು ಮಾಡಿದಲ್ಲಿ ಉತ್ತಮ ಆದಾಯ ಪಡೆದುಕೊಳ್ಳಬಹುದಾಗಿದೆ ಎಂದರು.

# ಉತ್ತರ ಕರ್ನಾಟಕದ ಚರ್ಚೆ ಮೇಲೆ ಮುಖ್ಯಮಂತ್ರಿಗಳ ಉತ್ತರ



ಬೆಳಗಾವಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಉತ್ತರ ಕರ್ನಾಟಕದ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿಧಾನಪರಿಷತ್ತಿನಲ್ಲಿ ನಡೆದ ಚರ್ಚೆಗೆ ಉತ್ತರ ನೀಡಿದರು.

ಉತ್ತರ ಕರ್ನಾಟಕದ ಬಗ್ಗೆ ಎರಡೂ ಸದನಗಳಲ್ಲಿ ಹೆಚ್ಚು ಸದಸ್ಯರು ಮಾತನಾಡಿದ್ದಾರೆ. ಇಲ್ಲಿ ಬಿಜೆಪಿಯವರು 7 ಜನ ಹಾಗೂ ಕಾಂಗ್ರೆಸ್ ನ 5 ಜನ ಮಾತನಾಡಿದ್ದಾರೆ. ಬಿಜೆಪಿ ಹಾಗೂ ಕಾಂಗ್ರೆಸ್ ಸದಸ್ಯರು ಸೇರಿದಂತೆ ಒಟ್ಟು 5 ಗಂಟೆ 48 ನಿಮಿಷ ಮಾತನಾಡಿದ್ದಾರೆ. ಉತ್ತರ ಕರ್ನಾಟಕದ ಚರ್ಚೆ ಅಧಿವೇಶನದ ಎರಡನೇ ದಿನವೇ ಪ್ರಾರಂಭವಾಗಿದ್ದು ಇದೇ ಮೊದಲನೇ ಬಾರಿ ಎಂದರು.

## ಪ್ರಾದೇಶಿಕ ಅಸಮತೋಲನ ನಿವಾರಣೆಯಿಂದ ಸಮಾನತೆ ಸಾಧ್ಯ:

ವಿಧಾನ ಪರಿಷತ್ ನ ಹಿರಿಯ ಮನೆ ಎಂದು ಕರೆಯಲಾಗುತ್ತಿದ್ದು, ಇಲ್ಲಿನ ಸದಸ್ಯರ ಮಾತಿಗೆ ತೂಕವಿರುತ್ತದೆ. ಸದಸ್ಯರ ಸಲಹೆಗಳು ಉತ್ತರ ಕರ್ನಾಟಕದ ಅಭಿವೃದ್ಧಿಯಲ್ಲಿ ಬಹಳ ಮುಖ್ಯವಾಗುತ್ತದೆ. ಕರ್ನಾಟಕದಲ್ಲಿ 6.95 ಲಕ್ಷ ಜನರಿದ್ದಾರೆ. ಅದರಲ್ಲಿ ಉತ್ತರ ಕರ್ನಾಟಕದಲ್ಲಿ 2 .96,28,767 ಜನರಿದ್ದಾರೆ. 42% ಮಾತ್ರ ಉತ್ತರ ಕರ್ನಾಟಕದಲ್ಲಿ ಇದ್ದಾರೆ. 58% ದಕ್ಷಿಣ ಕರ್ನಾಟಕದಲ್ಲಿದ್ದಾರೆ. ಉತ್ತರ ಕರ್ನಾಟಕದಲ್ಲಿ 31 ಜಿಲ್ಲೆಗಳಲ್ಲಿ 14 ಉತ್ತರ ಕರ್ನಾಟಕಕ್ಕೆ ಬರುತ್ತವೆ. 224 ವಿಧಾನ ಸಭಾ ಕ್ಷೇತ್ರಗಳಲ್ಲಿ 97 ಕಲ್ಯಾಣ ಕರ್ನಾಟಕ ಹಾಗೂ ಕಿತ್ತೂರು ಕರ್ನಾಟಕ ಭಾಗದಲ್ಲಿ ಬರುತ್ತವೆ. ರಾಜ್ಯದ ಸಮಗ್ರ ಅಭಿವೃದ್ಧಿಗೆ ದಕ್ಷಿಣ ಕರ್ನಾಟಕ ಹಾಗೂ ಉತ್ತರ ಕರ್ನಾಟಕದ ಅಸಮತೋಲನ ನಿವಾರಣೆಯಾಗಿ ಸಮಾನತೆ ಸಾಧಿಸಬೇಕು. ಪ್ರಾದೇಶಿಕ ಅಸಮಾನತೆ ನಿವಾರಿಸದಿದ್ದರೆ, ಜನರ ಕೂಗು ಇದ್ದೇ ಇರುತ್ತದೆ. ಉತ್ತರ ಕರ್ನಾಟಕದ ಬಗ್ಗೆ ಅಭಿವೃದ್ಧಿಯಾಗದೇ ಇರಲು ಹಲವು ಕಾರಣಗಳಿವೆ ಎಂದರು.

## ಕರ್ನಾಟಕ ತಲಾವಾರು ಆದಾಯದಲ್ಲಿ ದೇಶದಲ್ಲಿ ಮೊದಲನೇ ಸ್ಥಾನ:

ಬೆಂಗಳೂರು ಹಾಲು ಯೂನಿಯನ್ ಲ್ಲಿ ನೋಡಿದರೆ. ಒಂದು ದಿನಕ್ಕೆ 17 ಲಕ್ಷ ಲೀ. ಉತ್ಪಾದನೆಯಗುತ್ತಿದ್ದು, ಕಲ್ಬುರ್ಗಿ ಹಾಲು ಯೂನಿಯನ್ ದಲ್ಲಿ 67 ಸಾವಿರ ಲೀ. ಹಾಲು ಉತ್ಪಾದನೆಯಾಗುತ್ತದೆ. ಇದು ಪ್ರಾದೇಶಿಕ ಅಸಮಾನತೆಗೆ ಸ್ಪಷ್ಟ ಉದಾಹರಣೆಯಾಗಿದೆ. ಇದು ಜಿಲ್ಲಾವಾರು ತಲಾ ಆದಾಯದ ಮೇಲೂ ಪರಿಣಾಮ ಬೀರುತ್ತದೆ. ಕರ್ನಾಟಕ ರಾಜ್ಯದಲ್ಲಿ ಸರಾಸರಿ ತಲಾ ಆದಾಯ 3,39,813 ರೂ. ಇದೆ. ಕರ್ನಾಟಕ ತಲಾ ಆದಾಯದಲ್ಲಿ ದೇಶದಲ್ಲಿ ನಂ.1 ರಾಜ್ಯವಾಗಿದೆ. ಹೈನುಗಾರಿಕೆ ಚಟುವಟಿಕೆಗಳು , ಕೈಗಾರಿಕೆಗಳು ಜಾಸ್ತಿಯಾದರೆ, ಜನರ ವಲಸೆ ಕಡಿಮೆ , ಆರ್ಥಿಕ ತೆ ಸುಧಾರಿಸಿ, ತಲಾ ಆದಾಯವೂ ಜಾಸ್ತಿಯಾಗುತ್ತದೆ. ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಜನರ ತಲಾವಾರು ಆದಾಯ ಹೆಚ್ಚಾಗಿದೆ. ಆದ್ದರಿಂದ ಕರ್ನಾಟಕ ತಲಾವಾರು ಆದಾಯದಲ್ಲಿ ಮೊದಲನೇ ಸ್ಥಾನದಲ್ಲಿದೆ ಎಂದರು.

## 371 ಜೆ ವಿಶೇಷ ಸ್ಥಾನಮಾನ ಕೊಟ್ಟಿದ್ದು ಕೇಂದ್ರದಲ್ಲಿದ್ದ ಕಾಂಗ್ರೆಸ್ ಸರ್ಕಾರ:

ಹೈದರಾಬಾದ್ ಕರ್ನಾಟಕವನ್ನು 371 ಜೆ ಗೆ ಸೇರಿಸಬೇಕೆಂದುಬಹಳ ಹಿಂದಿನಿಂದಲೂ ಕೂಗಿತ್ತು. 1991ರಲ್ಲಿ ಹೆಚ್. ಕೆ.ಡಿ. ಬಿ ಪ್ರಾರಂಭವಾಯಿತು. ನಂತರ 2011– 13 ರಲ್ಲಿ , 6/11/2013 ರಲ್ಲಿ ಸಂವಿಧಾನಕ್ಕೆ ತಿದ್ದುಪಡಿ ತಂದು 371 ಜೆ ಸೇರ್ಪಡೆಯಾಯಿತು. 371 ಜೆ ವಿಶೇಷ ಸ್ಥಾನಮಾನ ಕೊಟ್ಟಿದ್ದು ಕೇಂದ್ರದಲ್ಲಿದ್ದ ಕಾಂಗ್ರೆಸ್ ಸರ್ಕಾರ. ಬಿಜೆಪಿಯ ಉಪ ಪ್ರಧಾನಿ ಎಲ್. ಕೆ.ಅಡ್ವಾಣಿ ಅವರುಅದನ್ನು ತಿರಸ್ಕರಿಸಿದರು. ಹೆಚ್ ಕೆ .ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ರಚಿಸಲಾದ ಸಮಿತಿಯು ಶೇ. 85% ರಷ್ಟು ಹೈದರಾಬಾದ್ ಕರ್ನಾಟಕದಲ್ಲಿ ಮೀಸಲಾತಿ ನೀಡಬೇಕೆಂದು ಹಾಗೂ ರಾಜ್ಯದ ಇತರ ಭಾಗಗಳಲ್ಲಿನ ಕಲ್ಯಾಣ ಕರ್ನಾಟಕ ಭಾಗದ ಜನರಿಗೆ 8% ಮಾಡಬೇಕೆಂದು ಮಾಡಿದ್ದ ಶಿಫಾರಸ್ಸನ್ನು ಯಥಾವತ್ತು ಜಾರಿಗೆ ತರಲಾಯಿತು ಎಂದರು.

## ಬಿಜೆಪಿಯವರು ಉತ್ತರ ಕರ್ನಾಟಕ ಅಭಿವೃದ್ಧಿಯ ವಿರೋಧಿಗಳು:

2013–14 ರಿಂದ ಉತ್ತರ ಕರ್ನಾಟಕದ ಅಭಿವೃದ್ಧಿಗೆ ವಿಶೇಷ ಅನುದಾನ ನೀಡಲಾಗುತ್ತಿದೆ. 2023 ರಲ್ಲಿ 3000 ಕೋಟಿ, 2024/25 ರಲ್ಲಿ 3000 ಕೋಟಿ, 2025/2026 ರಲ್ಲಿ 5000 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. ಇಲ್ಲಿಯವರೆಗೆ ಒಟ್ಟು ಅನುದಾನ ನೀಡಿರುವುದು 24778 ಕೋಟಿಯಾದರೆ, ಬಿಡುಗಡೆಯಾಗಿರುವುದು 16229 ರೂಪಾಯಿ, ಇಲ್ಲಿಯವರೆಗೆ ವೆಚ್ಚವಾಗಿರುವುದು14890 ರೂಪಾಯಿಗಳು ಎಂದರು. 2013 –14 ರಿಂದ ಇಲ್ಲಿಯವರೆಗೆ ಬಿಜೆಪಿಯ ಕೇಂದ್ರ ಸರ್ಕಾರ ಉತ್ತರ ಕರ್ನಾಟಕದ ಅಭಿವೃದ್ಧಿಗೆ ಒಂದು ಪೈಸೆಯನ್ನೂ ಕೊಟ್ಟಿಲ್ಲ. ಬಿಜೆಪಿಯವರು ಉತ್ತರ ಕರ್ನಾಟಕ ಅಭಿವೃದ್ಧಿಯ ವಿರೋಧಿಗಳು.

## ರಾಜ್ಯಕ್ಕೆ ಬರಬೇಕಾಗಿದ್ದ 11495 ಕೋಟಿ ರೂ. ಕೇಂದ್ರ ಕೊಟ್ಟಿಲ್ಲ:

15 ನೇ ಹಣಕಾಸು ಆಯೋಗದಲ್ಲಿ 5495 ಕೋಟಿ ವಿಶೇಷ ಅನುದಾನ ಸೇರಿದಂತೆ ಒಟ್ಟು 11495 ಕೋಟಿ ರೂ.ಗಳನ್ನು ಕೊಡುವುದಾಗಿ ಹೇಳಿದ್ದರೂ, ನಂತರ ಕೊಡಲಿಲ್ಲ. ಕಳೆದ ಮೂರು ವರ್ಷದಿಂದ ಈ ಮೊತ್ತವನ್ನು ಕೇಂದ್ರ ಮಂಜೂರು ಮಾಡಲೇ ಇಲ್ಲ. ವಿವಿಧ ಯೋಜನೆಗಳಡಿಯಲ್ಲಿ 125000 ಕೋಟಿ ರೂ.ಗಳು ಕೇಂದ್ರದಿಂದ ರಾಜ್ಯಕ್ಕೆ ಖೋತಾ ಆಗಿದೆ. ರಾಜ್ಯದಿಂದ ತೆರಿಗೆ 4.50 ಲಕ್ಷ ಕೋಟಿ ಸಂಗ್ರಹಣೆಯಾದರೂ , ನಮಗೆ ನ್ಯಾಯಯುತ ಪಾಲು ದೊರೆಯುತ್ತಿಲ್ಲ. ಕೆಕೆಆರ್ ಡಿಬಿ ಗೆ ಅನುದಾನ ಕೊಡದೇ , ಮಹಾರಾಷ್ಟ್ರದ ವಿಧರ್ಭ ಕ್ಕೆ ಹೆಚ್ಚಿನ ಅನುದಾನ ನೀಡುತ್ತಿದ್ದಾರೆ. ಕೃಷ್ಣಾ ಮೇಲ್ದಂಡೆ ಯೋಜನೆಯಲ್ಲಿ 173 ಟಿಎಂಸಿ ನೀರು ಬಳಸಿಕೊಳ್ಳಲು ಕೇಂದ್ರದಿಂದ ಇದುವರೆಗೆ ಅಧಿಸೂಚನೆ ಬಿಡುಗಡೆ ಮಾಡಿಲ್ಲ. ರಾಯಚೂರಿನಲ್ಲಿ ಏಮ್ಸ್ ಸ್ಥಾಪಿಸಲು ಅನುಮತಿ ನೀಡಿಲ್ಲ. ಈ ಬಗ್ಗೆ ಅನೇಕ ಬಾರಿ ಕೇಂದ್ರವನ್ನು ಮನವಿ ಮಾಡಿಕೊಂಡರೂ ಪ್ರಯೋಜನವಾಗಿಲ್ಲ.

## ನೀರಾವರಿ ಯೋಜನೆಗೆ ಕೇಂದ್ರದ ಅನುಮತಿ ದೊರೆತಿಲ್ಲ:

ಜಲಜೀವನ್ ಮಿಷನ್ ನಡಿ 13500 ಸಾವಿರ ಕೋಟಿ ರೂ. ಕೇಂದ್ರ ಕೊಡದೇ , ರಾಜ್ಯದಲ್ಲಿ ಅಭಿವೃದ್ಧಿ ಸಾಧಿಸಲು ಹೇಗೆ ಸಾಧ್ಯ? ರಾಜ್ಯದ ಪಾಲಿನ 22000 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಕಳಸಾ ಬಂಡೂರಿ ಯೋಜನೆಗೆ ಸರ್ವ ಪಕ್ಷ ನಿಯೋಗ ಕೇಂದ್ರಕ್ಕೆ ಒಯ್ಯಲಾಗಿತ್ತು. ಆಗ ಪ್ರಧಾನಿ ಮೋದಿಯವರು ಸರಿಯಾದ ಪರಿಹಾರ ನೀಡಿರಲಿಲ್ಲ. 2018 ರಲ್ಲಿ ಯಡಿಯೂರಪ್ಪನವರು, ಅಧಿಕಾರಕ್ಕೆ ಬಂದ 24 ಗಂಟೆಯಲ್ಲಿ ಈ ಸಮಸ್ಯೆ ಬಗೆಹರಿಸುವುದಾಗಿ ಘೋಷಿಸಿದ್ದರು. ಆದರೆ ಇದುವರೆಗೆ ಈ ಯೋಜನೆಗೆ ಹಸಿರು ನಿಶಾನೆ

ದೊರೆತಿಲ್ಲ ಎಂದರು.

## ಕೇಂದ್ರದಿಂದ ರಾಜ್ಯದ ರೈತರಿಗೆ ಅನ್ಯಾಯ:

ಕೇಂದ್ರ ಸರ್ಕಾರ 1 ಕೆಜಿ ಸಕ್ಕರೆಗೆ ಎಂ.ಎಸ್. ಪಿ ನಿಗದಿ 31 ರೂ 2019 ರಲ್ಲಿ ನಿಗದಿ ಮಾಡಿದೆ. ಆರು ವರ್ಷಗಳಲ್ಲಿ ಏನೂ ಬದಲಾವಣೆ ಮಾಡಿಲ್ಲ. 41 ರೂಗಳಿಗೆ ಹೆಚ್ಚಿಸಲು ಪ್ರಧಾನ ಮಂತ್ರಿಗಳಿಗೆ ಪತ್ರ ಬರೆಯಲಾಗಿದೆ. ಎಥನಾಲ್ ಹಂಚಿಕೆಯನ್ನು ಕೇಂದ್ರ ಸರ್ಕಾರವೇ ಮಾಡುವುದು. ರಫ್ತು ನಿಗದಿ ಮಾಡುವುದು ಕೂಡ ಕೇಂದ್ರ ಸರ್ಕಾರವೇ. ರೈತರಿಗೆ ಅನ್ಯಾಯ ಆಗಲು ಯಾರು ಕಾರಣ? ಎಫ್ ಆರ್ ಪಿ , ಎಂ ಎಸ್ ಪಿ , ಎಥನಾಲ್, ರಫ್ತು ಹೆಚ್ಚು ಮಾಡಲಿ. ಹೀಗಾದರೆ ಸ್ವಾಭಾವಿಕವಾಗಿ ಸಕ್ಕರೆ ಮತ್ತು ಕಬ್ಬಿನ ಬೆಲೆ ಹೆಚ್ಚಾಗುತ್ತದೆ ಎಂದರು.

## ಕೇಂದ್ರ ಸರ್ಕಾರ ನ್ಯಾಯಯುತ ಬೆಲೆ ನಿಗದಿ ಮಾಡಬೇಕು:

ಕಬ್ಬು ಬೆಳೆ: ಕರ್ನಾಟದಲ್ಲಿ 82 ಸಕ್ಕರೆ ಕಾರ್ಖಾನೆಗಳಿದ್ದು ಒಂದೇ ಒಂದು ಸರ್ಕಾರಿ ಸ್ವಾಮ್ಯದ ಸಕ್ಕರೆ ಕಾರ್ಖಾನೆ ಇದೆ. 11 ಸಹಕಾರಿ ಕಾರ್ಖಾನೆಗಳಿವೆ. ಸುಮಾರು 17 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಕಬ್ಬು ಬೆಳೆಯಲಾಗಿದೆ. 2025/26 ರಲ್ಲಿ 7.40 ಲಕ್ಷ ಪ್ರದೇಶದಲ್ಲಿ ಕಬ್ಬು ಬೆಳೆದಿದ್ದು, 600 ಲಕ್ಷ ಟನ್ ಕಬ್ಬು ಉತ್ಪಾದನೆ ಆಗಬಹುದೆಂದು ಅಂದಾಜಿಸಲಾಗಿದೆ. 2009 2010ರಿಂದ ಎಫ್ ಆರ್ ಪಿ ನಿಗದಿ ಮಾಡಲಾಗಿದೆ. ಇದನ್ನು ಕೇಂದ್ರ ಸರ್ಕಾರ ನಿಗದಿಮಾಡುತ್ತದೆ. 9.50 ಯಿಂದ 10.28 ರೂ. ಎಫ್ ಆರ್ ಪಿ ನಿಗದಿ ಮಾಡಿದ್ದಾರೆ.

2022/23 ರಿಂದ 10.25 ಮಾಡಿದ್ದಾರೆ. ಈ ವರ್ಷ ಒಂದು ಟನ್ ಕಬ್ಬಿಗೆ 3550 ರೂಪಾಯಿ ಗಳಿದ್ದು, ಹೆಚ್ ಅಂಡ್ ಟಿ ಕಳೆದರೆ ( 800 ರಿಂದ 900 ರೂ ಗಳಿವೆ )2700 ರೂಪಾಯಿ ನಿಗದಿಯಾಗುತ್ತದೆ. ಹೀಗಾಗಿ ರೈತರು ಹೋರಾಟ ಮಾಡಿದರು. ಸರ್ಕಾರ ರೈತರೊಂದಿಗೆ ಸುದೀರ್ಘ ಸಭೆ ನಡೆಸಿ 10.25 ಇಳುವರಿ ಇದ್ದವರಿಗೆ 3300 ರೂಪಾಯಿ ಕೊಡಲು ತೀರ್ಮಾನಿಸಲಾಯಿತು. ಚಳುವಳಿಯನ್ನು ಹಿಂಪಡೆಯಲಾಯಿತು ಎಂದರು.

## ಉತ್ತರ ಕರ್ನಾಟಕದ ಶಿಕ್ಷಣ, ಆರೋಗ್ಯಕ್ಕೆ ಹೆಚ್ಚಿನ ಒತ್ತು:

ಉತ್ತರ ಕರ್ನಾಟಕದ ಜಿಲ್ಲೆಯಲ್ಲಿ ಶಿಕ್ಷಣ, ಆರೋಗ್ಯ , ಪೌಷ್ಠಿಕತೆ ಸುಧಾರಿಸಲು ಆದ್ಯತೆ ನೀಡುವಂತೆ ಸೂಚನೆ ನೀಡಲಾಗಿದೆ. 10 ಸಾವಿರ ವೈದ್ಯಕೀಯ ವಿದ್ಯಾರ್ಥಿಗಳಿಗೆ ಪ್ರವೇಶ ದೊರೆತಿದೆ, 31 ಸಾವಿರ ಇಂಜಿನಿಯರಿಂಗ್ ಪ್ರವೇಶ ದೊರೆತಿದೆ., 12 ಸಾವಿರ ಡೆಂಟಲ್ ಸೇರಿದಂತೆ ವೃತ್ತಿಪರ ಕೋರ್ಸುಗಳಿಗೆ ಪ್ರವೇಶ ದೊರೆತಿದೆ. 371 ಜೆ ಜಾರಿಯಿಂದ ಉತ್ತ ರ್ನಾಟಕದ ಎಲ್ಲ ಆಯಾಮಗಳಲ್ಲಿಯೂ ಅಭಿವೃದ್ಧಿಯಾಗಿದೆ. ಉದ್ಯೋಗದಲ್ಲಿಯೂ ಒತ್ತು ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಅದಕ್ಕೆ ಪೂರಕವಾಗಿ ಕೇಂದ್ರದಿಂದ ರಾಜ್ಯಕ್ಕೆ ಅನುದಾನ ನೀಡಬೇಕು ಎಂದರು.

## ನಮ್ಮ ಸರ್ಕಾರ ಅಸ್ಥಿರವಾಗುವ ಪ್ರಶ್ನೆಯೇ ಇಲ್ಲ:

ಎರಡನೇ ಬಾರಿ ನಾನು ಮುಖ್ಯಮಂತ್ರಿಯಾಗಿದ್ದು, ನನ್ನನ್ನು ಯಾರೂ ಅಲುಗಾಡಿಸಲು ಸಾಧ್ಯವಿಲ್ಲ.. ಬಿಜೆಪಿಯವರು 9 ವರ್ಷದಲ್ಲಿ 5 ಜನ ಮುಖ್ಯಮಂತ್ರಿಗಳಾಗಿದ್ದರು. ಬಿಜೆಪಿಯ ಪ್ರಯತ್ನ ಹುಳಿಹಿಂಡುವ ಪ್ರಯತ್ನ ಸಫಲವಾಗುವು. ನಮ್ಮ ಸರ್ಕಾರ ಗಟ್ಟಿಯಾಗಿದ್ದು, ಅಸ್ಥಿರವಾಗುವ ಪ್ರಶ್ನೆಯೇ ಇಲ್ಲ. ಇದು ಬಿಜೆಪಿಯ ಭ್ರಮೆ.ತನ್ನ ಪೂರ್ಣ ಅವಧಿಯನ್ನು ಮುಗಿಸಿ , ನಂತರ 2028 ರಲ್ಲೂ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲಿದೆ. 2008 , 2018 ಅವಧಿಯಲ್ಲಿ ಬಿಜೆಪಿ ಜನಾರ್ಶೀರ್ವಾದ ಪಡೆದು ಅಧಿಕಾರಕ್ಕೆ ಬಂದಿಲ್ಲ. ರಾಜ್ಯದ ಜನರು ಬಿಜೆಪಿಗೆ ಒಮ್ಮತ ತೋರಿಸಿಲ್ಲ. ಆಪರೇಷನ್ ಕಮಲದ ಮೂಲಕ ಅಧಿಕಾರಕ್ಕೆ ಬಂದಿದ್ದಾರೆ ಎಂದರು.

# ನೀರಾವರಿ ತಜ್ಞ, ರಾಜ್ಯಕಂಡ ಮುತ್ಸದಿ ರಾಜಕಾರಣಿ, ಟಿ.ಬಿ.ಜಯಚಂದ್ರರವರಿಗೆ ಸಚಿವ ಸ್ಥಾನ ನೀಡುವಂತೆ

# ಡಿ. 23ಕ್ಕೆ ಬೃಹತ್ ಪಂಜಿನ ಮೆರವಣಿಗೆ

**ಶಿರಾ** : 5 ದಶಕಗಳ ಕಾಲ ಕಾಂಗ್ರೆಸ್ ಪಕ್ಷಕ್ಕೆ ನಿಷ್ಠಾವಂತ ಕಾರ್ಯಕರ್ತರಾಗಿ ಪ್ರಾಮಾಣಿಕ ಸೇವೆ ಮಾಡುತ್ತಿರುವ ರಾಜಕೀಯ ಮುತ್ಸದಿ, ಅಭಿವೃದ್ಧಿ ಹರಿಕಾರ, ಬರದ ನಾಡಿನ ಭಗೀರಥ ಶಿರಾ ಕ್ಷೇತ್ರದ ಶಾಸಕ ಟಿ.ಬಿ.ಜಯಚಂದ್ರ ರವರಿಗೆ ಸಚಿವ ಸಂಪುಟ ವಿಸ್ತರಣೆಯಲ್ಲಿ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ ಡಿ.23 ಮಂಗಳವಾರ ಸಂಜೆ 5 ಗಂಟೆಗೆ ಶಿರಾ ನಗರದಲ್ಲಿ ತಾಲ್ಲೂಕಿನ ಸಹಸ್ರಾರು ಟಿ ಬಿಜೆ ಅಭಿಮಾನಿಗಳು ಬೃಹತ್ ಪಂಜಿನ ಮೆರವಣಿಗೆ ನಡೆಸುವ ಮೂಲಕ ಸರ್ಕಾರದ ಗಮನ ಸೆಳೆಯಲಿದ್ದೇವೆ ಎಂದು ಹುಣಸೇಹಳ್ಳಿ ಪ್ರಾಥಮಿಕ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಹೆಚ್. ಪಿ. ಶಶಿಧರ ಹೇಳಿದರು. ಶಿರಾ ತಾಲ್ಲೂಕಿನ ಹುಣಸೆಹಳ್ಳಿ ಗ್ರಾಮದಲ್ಲಿ ಶನಿವಾರ ಸುದ್ದಿಗರರೊಂದಿಗೆ ಮಾತನಾಡಿ ತಿಳಿಸಿದರು.

ಈ ಹಿಂದೆ ಕಾಂಗ್ರೇಸ್ ನೇತೃತ್ವದ ಸರ್ಕಾರದಲ್ಲಿ ಹಲವು ಭಾರಿ ಸಚಿವರಾಗಿ ಸೇವೆ ಸಲ್ಲಿಸಿದ್ದು, ಅಭಿವೃದ್ಧಿ ವಿಚಾರವಾಗಿ ಸಾಕಷ್ಟು ಅನುಭವಿರುವ ಹಿರಿಯ ಶಾಸಕ ಟಿ .ಬಿ.ಜಯಚಂದ್ರ ರವರಿಗೆ ಈ ಭಾರಿಯ ಸಚಿವ ಸಂಪುಟ ಪುನರ್ ರಚನೆಯಲ್ಲಿ ಸಚಿವ ಸ್ಥಾನ ನೀಡಿ ಇವರ ಅಪಾರವಾದ ರಾಜಕೀಯ ಅನುಭವವನ್ನು ರಾಜ್ಯದ ಅಭಿವೃದ್ಧಿಗೆ ಬಳಸಿಕೊಳ್ಳುವುದರ ಜೊತೆಗೆ ಸರ್ಕಾರದ ಸುಲಲಿತ ಆಡಳಿತಕ್ಕೆ ಜಯಚಂದ್ರ ರವರ ಸಂಪುಟ ಸೇರ್ಪಡೆ ಅಗತ್ಯವಾಗಿದ್ದು ಈ ನಿಟ್ಟಿನಲ್ಲಿ ಕಾಂಗ್ರೆಸ್ ಹೈ ಕಮಾಂಡ್ ಹಾಗೂ ಸರ್ಕಾರದ ಗಮನ ಸೆಳೆಯುವ ಉದ್ದೇಶದಿಂದ ಈ ಬೃಹತ್ ಪಂಜಿನ ಮೆರವಣಿಗೆ ಆಯೋಜನೆ ಮಾಡಲಾಗಿದೆ ಎಂದು ತಿಳಿಸಿದರು.



## ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಶಿವು ಚಂಗಾವರ ಮಾತನಾಡಿ:

ಶಿರಾ ಕ್ಷೇತ್ರದ ಅಭಿವೃದ್ಧಿಗೆ ವಿವಿಧ ಇಲಾಖೆ ಗಳಿಂದ ಬಹು ಕೋಟಿ ರೂಪಾಯಿ ಅನುದಾನ ತರುವಲ್ಲಿ ಜಯಚಂದ್ರ ಅವರು ಯಶಸ್ವಿಯಾಗಿದ್ದಾರೆ. ಇದಲ್ಲದೆ ಶಿರಾ ಶಿಕ್ಷಣ ಕಾಶಿ ಮಾಡುವತ್ತ ದೃಢ ನಿರ್ಧಾರ ಮಾಡಿದ್ದು, ಬಡ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಸಿಗಬೇಕೆಂಬ ಉದ್ದೇಶದಿಂದ ಅನೇಕ ವಸತಿಶಾಲೆಗಳನ್ನು ತಂದಿರುವುದು ಇವರ ಶಿಕ್ಷಣ ಪ್ರೇಮಕ್ಕೆ ಇಡಿದ ಕನ್ನಡಿಯಾಗಿದೆ, ತಾಲ್ಲೂಕಿಗೆ ಸತತ ಹೇಮಾವತಿ ನೀರು ಹರಿಯುತ್ತಿರುವ ಕಾರಣ ಬಹುತೇಕ ಎಲ್ಲಾ ಕೆರೆಗಳು ಹಾಗೂ 40 ಕ್ಕೂ ಅಧಿಕ ಬ್ರಿಡ್ಜ್ ಕಮ್ ಚೆಕ್ ಡ್ಯಾಮ್ ಗಳು ತುಂಬಿ ಹರಿಯುತ್ತಿದ್ದು ಅಂತರ್ಜಲ ಹೆಚ್ಚುವಲ್ಲಿ ಸಹಕಾರಿಯಾಗಿದ್ದು ಜಯಚಂದ್ರ ಅವರು ಅಭಿವೃದ್ಧಿ ಹರಿಕಾರ ಎಂಬ ಪದಕ್ಕೆ ನಿಜ ಅರ್ಥ ನೀಡಿದ್ದಾರೆ. ಇಂತಹ ಮುತ್ಸದಿ ರಾಜಕಾರಣಿ ಸರ್ಕಾರದಲ್ಲಿ ಸಚಿವರಾಗಬೇಕೆಂಬುದು ಶಿರಾ ಕ್ಷೇತ್ರದ ಜನತೆಯ ಒತ್ತಾಸೆಯಾಗಿದ್ದು, ಬರುವ ಡಿ.23ರ ಮಂಗಳವಾರ ಟಿ .ಬಿ.ಜಯಚಂದ್ರ ಅಭಿಮಾನಿ ಬಳಗದ ವತಿಯಿಂದ ಬೃಹತ್ ಪಂಜಿನ ಮೆರವಣಿಗೆ ಹಮ್ಮಿಕೊಳ್ಳಲಾಗಿದ್ದು, ತಾಲ್ಲೂಕಿನ ಜನತೆ ಪಕ್ಷಾತೀತವಾಗಿ ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ಹುಣಸೆಹಳ್ಳಿ ಗ್ರಾಮ ಪಂಚಾಯತಿ ಅಧ್ಯಕ್ಷ ರೇಖಾ, ಗ್ರಾಮ ಪಂಚಾಯತಿ ಸದಸ್ಯರಾದ ಪುಟ್ಟ ಜುಂಜಯ್ಯ, ಮುಖಂಡ ಲಕ್ಷ್ಮಿ ರಾಜು, ಪದ್ದಣ್ಣ, ಶಿಕ್ಷಣ ಪ್ರೇಮಿ ಮಂಜುನಾಥ್, ವಿಶ್ವನಾಥ್ ಸೇರಿದಂತೆ ಹಲವಾರು ಮುಖಂಡರು ಇದ್ದರು

ಸೂರ್ಯ ಪ್ರಗತಿ
ಪತ್ರಿಕೆಯನ್ನು ಕೊಂಡು
ಓದಿ ಜಾಹೀರಾತಿಗಾಗಿ
ಸಂಪರ್ಕಿಸಿ
9901010109

# ಶ್ರೀ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆಯ ಜಿಲ್ಲಾ ಮಟ್ಟದ ಸಿಬ್ಬಂದಿಗಳ ತರಬೇತಿ ಕಾರ್ಯಾಗಾರ



ಶಿರಾ: ಶ್ರೀ ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಯೋಜನೆ (ಖಏಆಖಆಕ) ವತಿಯಿಂದ ತುಮಕೂರು–2 ಜಿಲ್ಲೆಯ ಜಿಲ್ಲಾ ಮಟ್ಟದ ಕಚೇರಿ ಸಿಬ್ಬಂದಿಗಳ ತರಬೇತಿ ಕಾರ್ಯಾಗಾರವನ್ನು ನಗರದ ಕನಿಕಪರಮೇಶ್ವರಿ ದೇವಸ್ಥಾನದ ಆವರಣದಲ್ಲಿ ಆಯೋಜಿಸಲಾಗಿತ್ತು.

ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಬೆಂಗಳೂರು ಪ್ರಾದೇಶಿಕ ವಿಭಾಗದ ನಿರ್ದೇಶಕರಾದ ಶೀನಪ್ಪ ಅವರು, ಪರಮಪೂಜ್ಯ ಡಾ. ಡಿ. ವೀರೇಂದ್ರ ಹೆಗ್ಗಡೆಯವರು ಮತ್ತು ಮಾತೃಶ್ರೀ ಅಮ್ಮನವರ ಆಶಯದಂತೆ ಸಂಸ್ಥೆಯ ಪ್ರತಿಯೊಬ್ಬ ಸಿಬ್ಬಂದಿಯೂ ತಮಗೆ ವಹಿಸಿದ ಜವಾಬ್ದಾರಿಯನ್ನು ಅತ್ಯಂತ ಪ್ರಾಮಾಣಿಕವಾಗಿ ಮತ್ತು ನಿಷ್ಠೆಯಿಂದ ನಿರ್ವಹಿಸಬೇಕು ಎಂದು ಕರೆ ನೀಡಿದರು. ಅಲ್ಲದೆ, ವೃತ್ತಿಜೀವನದಲ್ಲಿ ಅಳವಡಿಸಿಕೊಳ್ಳಬೇಕಾದ ಶಿಸ್ತು ಹಾಗೂ ಸೇವಾ ಮನೋಭಾವದ ಬಗ್ಗೆ ಸಿಬ್ಬಂದಿಗಳಿಗೆ ಮಾರ್ಗದರ್ಶನ ನೀಡುವುದರ ಜೊತೆಗೆ ದೈನಂದಿನ ಕರ್ತವ್ಯಗಳ ಬಗ್ಗೆ ಗಮನಹರಿಸುವಂತೆ ಸಲಹೆ ನೀಡಿದರು.

ತುಮಕೂರು–2 ಜಿಲ್ಲೆಯ ಜಿಲ್ಲಾ ನಿರ್ದೇಶಕರಾದ ಪ್ರವೀಣ್ ಮಾತನಾಡಿ : ಯೋಜನೆಯ ವಿವಿಧ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಕಚೇರಿ ಸಿಬ್ಬಂದಿಗಳ ಪಾತ್ರ ಮಹತ್ವದ್ದಾಗಿದೆ. ದೈನಂದಿನ ಕೆಲಸ ಕಾರ್ಯಗಳಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳುವ ಬಗ್ಗೆ ಮತ್ತು ಕರ್ತವ್ಯ ನಿರ್ವಹಣೆಯ ವಿಧಾನಗಳ ಕುರಿತು ಸವಿಸ್ತಾರವಾಗಿ ಮಾಹಿತಿ ನೀಡಿದರು.

ಸಭೆಯಲ್ಲಿ ಉಪಸ್ಥಿತರಿದ್ದ ಪ್ರಮುಖರುಗಳಾದ ಜಿಲ್ಲಾ ಎಂ.ಐ.ಎಸ್ (ಒಋಖ) ಯೋಜನಾಧಿಕಾರಿಗಳು.

ಜಿಲ್ಲೆಯ ಎಂಟು ತಾಲೂಕುಗಳ ಯೋಜನಾಧಿಕಾರಿಗಳು.ಜಿಲ್ಲಾ ಮತ್ತು ತಾಲೂಕು ಕಚೇರಿಗಳ ಎಲ್ಲಾ ಸಿಬ್ಬಂದಿ ವರ್ಗದವರಿಗೆ ಈ ಕಾರ್ಯಾಗಾರವು ಹೊಸ ಉತ್ಸಾಹ ತುಂಬುವಲ್ಲಿ ಹಾಗೂ ಯೋಜನೆಯ ಗುರಿಗಳನ್ನು ತಲುಪಲು ಪೂರಕವಾದ ವೇದಿಕೆಯಾಗಿ ನಿರ್ಮಾಣವಾಗಿತ್ತು.ಈ ಸಭೆಯಲ್ಲಿ ಜಿಲ್ಲೆಯ ಎಂಐಎಸ್ ಯೋಜನಾಧಿಕಾರಿಗಳು ಮತ್ತು ಎಂಟು ತಾಲೂಕಿನ ಯೋಜನಾಧಿಕಾರಿಗಳುಹಾಗೂ ಜಿಲ್ಲಾ ಕಚೇರಿಯ ಸಿಬ್ಬಂದಿಗಳು .ಜಿಲ್ಲೆಯತಾಲೂಕು ಕಚೇರಿಗಳ ಸಿಬ್ಬಂದಿಗಳು ಭಾಗವಹಿಸಿದರು.

# ಮೇಲನಹಳ್ಳಿಯಲ್ಲಿ ಹುಳಿಯಾರು ಕಸದ ಘಟಕ ನಿರ್ಮಾಣ ಬೇಡ

## ಹುಳಿಯಾರು ಸಮೀಪದಲ್ಲೇ ಸ್ಥಳಿರುವಾಗ 20 ಕಿ.ಮೀ ದೂರದ ಭೂಮಿ ಮೇಲೆ ಕಣ್ಣೇಕೆ?





**ಹುಳಿಯಾರು:** ಹುಳಿಯಾರು ಕಸ ವಿಲೇವಾರಿ ಘಟಕವನ್ನು ಎಚ್.ಮೇಲನಹಳ್ಳಿ ಬಳಿ ನಿರ್ಮಾಣ ಮಾಡಲು ನಾವು ಬಿಡುವುದಿಲ್ಲ. ಹುಳಿಯಾರು ಸಮೀಪದಲ್ಲೇ ಸಾಕಷ್ಟು ಸರ್ಕಾರಿ ಭೂಮಿ ಇರುವಾಗ 20 ಕಿ.ಮೀ. ದೂರದ ಎಚ್.ಮೇಲನಹಳ್ಳಿಯ ಭೂಮಿಯ ಮೇಲೆ ಕಣ್ಣೇಕೆ? ಎಂದು ಸ್ಥಳೀಯರು ತಹಸೀಲ್ದಾರ್ ಅವರನ್ನು ಪ್ರಶ್ನಿಸಿದ ಘಟನೆ ಶನಿವಾರ ನಡೆದಿದೆ.

ಹುಳಿಯಾರಿನ ಕಸ ವಿಲೇವಾರಿ ಘಟಕ ನಿರ್ಮಿಸಲು ಎಚ್.ಮೇಲನಹಳ್ಳಿ ಸರ್ವೆ ನಂಬರ್ 69 ಹಾಗೂ 69/3 ರಲ್ಲಿ ಈ ಹಿಂದಿನ ತಹಸೀಲ್ದಾರ್ ಕೆ.ಪುರಂದರ ಅವರು ಸ್ಥಳ ಗುರುತಿಸಿದ್ದು ನೂತನ ತಹಸೀಲ್ದಾರ್ ಎಂ.ಮಮತ ಅವರು ಶನಿವಾರ ಸ್ಥಳ ವೀಕ್ಷಣೆಗೆ ಆಗಮಿಸಿದ್ದರು. ಈ ಸಂದರ್ಭದಲ್ಲಿ ಘಟಕ ನಿರ್ಮಾಣ ಸ್ಥಳಕ್ಕೆ ಹೋಗದೆ ಗ್ರಾಮದಲ್ಲೇ ಸ್ಥಳೀಯರು ಕಾರಿಗೆ ಮುತ್ತಿಗೆ ಹಾಕಿ ವ್ಯಾಪಕ ವಿರೋಧ ವ್ಯಕ್ತಪಡಿಸಿದರು. ಹಿಂದಿನ ತಹಸೀಲ್ದಾರ್ ಅವರ ನಡೆಯನ್ನು ತೀವ್ರವಾಗಿ ಖಂಡಿಸಿದರು.

ಎಚ್.ಮೇಲನಹಳ್ಳಿಗ್ರಾಮದಲ್ಲೇ 1800 ರಿಂದ 2000 ಸಾವಿರ ಜನಸಂಖ್ಯೆ ಇದೆ. ಅಲ್ಲದೆ ಊರಿಗೆ ಹೊಂದಿಕೊಂಡಂತೆ ಹನುಮದಾಸಯ್ಯನಪಾಳ್ಯ, ಜಯಸುವರ್ಣಪುರ, ಲಂಬಾಣಿತಾಂಡ್ಯ ಹಾಗೂ ತೋಟದ ಮನೆಗಳೂ ಸಹ ಇವೆ. 2024-25 ನೇ ಸಾಲಿನ ಪಶು ಇಲಾಖೆ ನಡೆಸಿದ ಗಣತಿಯ ಪ್ರಕಾರ 231 ದನಗಳು, 530 ಎಮ್ಮೆಗಳು, 2000 ಕ್ಕೂ ಹೆಚ್ಚು ಕುರಿ ಮೇಕೆಗಳಿಗೆ. ಈಗ ಕಸ ವಿಲೇವಾರಿ ಘಟಕ ನಿರ್ಮಿಸಲು ಉದ್ದೇಶಿಸಿರುವ ಸ್ಥಳವೇ ಇಷ್ಟು ಜಾನುವಾರುಗಳು ಅನಾದಿಕಾಲದಿಂದಲೂ ಮೇವಿನ ಆಶ್ರಯ ತಾಣವಾಗಿದೆ. ಇಲ್ಲಿ ಕಸದ ಘಟಕ ಮಾಡಿದರೆ ಮೂಕಪ್ರಾಣಿಗಳ ಮೇವಿಗೆ ತೊಂದರೆಯಾಗುತ್ತದೆ ಎಂದು ತಿಳಿಸಿದ್ದಾರೆ.

ಎಚ್.ಮೇಲನಹಳ್ಳಿ ಸುತ್ತಲಿನ ಪ್ರದೇಶ ಮಲೆನಾಡನ್ನೂ ನಾಚಿಸುವಂತ ಪ್ರಕೃತಿ ಸೊಬಗನ್ನು ಹೊಂದಿದೆ. ಗುಡ್ಡಗಾಡು ಪ್ರದೇಶ, ಅರಣ್ಯ ಪ್ರದೇಶ ಸಮೀಪದಲ್ಲಿರುವುದರಿಂದ ವನ್ಯಜೀವಿಗಳಾದ ನವಿಲು, ಜಿಂಕೆ, ಕಾಡುಹಂದಿ, ಚಿರತೆಗಳ ಆಶ್ರಯ ತಾಣವಾಗಿದೆ. ಅಲ್ಲದೆ ಅಸಂಖ್ಯಾತ ಪಕ್ಷಿ ಸಂಕುಲಗಳಿವೆ. ಇಲ್ಲಿ ಹುಳಿಯಾರು ಪಟ್ಟಣದ ಕಸ ಸುರಿದರೆ ಪ್ರಕೃತಿ ಕಲ್ಮಶವಾಗಿ ಪ್ರಾಣಿಪಕ್ಷಿಗಳ ಪ್ರಾಣಕ್ಕೆ ಕುತ್ತು ತಂದಂತಾಗುತ್ತದೆ. ಸಮೀಪದಲ್ಲಿ ಭೂತ ಪ್ಪನ ವಜ್ರವಿದ್ದು ಎಂದೂ ಬತ್ತದ ನೀರಿನ ಒರತೆಯಿದ್ದು ಈ ಭಾಗಕ್ಕೆ ಜೀವಜಲವಾಗಿದೆ. ಕಸದ ಘಟಕ ಮಾಡಿದರೆ ಮಳೆಗಾಲದಲ್ಲಿ ಕಲುಷಿತ ನೀರು ಹರಿದು ಕಲ್ಯಾಣಿ ಸೇರಿ ನೀರು ಮಲಿನಗೊಳ್ಳುತ್ತದೆ. ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

25 ಕೀ.ಮೀ.ದೂರದಲ್ಲಿ ಘಟಕ ಸ್ಥಾಪನೆಯಿಂದ ಸಾಗಾಣಿಕೆ ವೆಚ್ಚವೂ ಅಧಿಕವಾಗುತ್ತದೆ. ಯಾವುದೇ ಕಾರಣಕ್ಕೂ ಇಲ್ಲಿ ಘಟಕ ಸ್ಥಾಪನೆಗೆ ಅವಕಾಶ ಕೊಡುವುದಿಲ್ಲ ಎಂದು ಮಹಿಳೆಯರು ಸೇರಿದಂತೆ ಗ್ರಾಮಸ್ಥರು ಒಕ್ಕೊರಲಿನಿಂದ ತಮ್ಮ ನಿಲುವು ಪ್ರಕಟಿಸಿದರು. ಆದರೂ ತಹಶಿಲ್ದಾರ್ ಎಂ.ಮಮತಾ ಗ್ರಾಮಸ್ಥರ ಮನವೊಲಿಸಿ ಸ್ಥಳ ಪರಿಶೀಲನೆ ನಡೆಸಿದರು. ಸಿಪಿಐ ಜನಾರ್ಧನ್, ಪ್ರಭಾರ ಪಿಎಸ್ಐ ಚಿತ್ತರಂಜನ್, ಕಂದಾಯ ತನಿಖಾಧಿಕಾರಿ ಶ್ರೀನಿವಾಸ್, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಂಜುನಾಥ್ ಸೇರಿದಂತೆ ಅಧಿಕಾರಿಗಳು ಹಾಜರಿದ್ದರು.

ಮಳೆಗಾಲದಲ್ಲಿ ಗುಡ್ಡಗಳ ಮೇಲೆ ಬಿದ್ದಂತ ನೀರು ಮೇಲನಹಳ್ಳಿ ಮೂಲಕ ಸೋಮನಹಳ್ಳಿ ಕೆರೆ ಸೇರಿ ಅಲ್ಲಿಂದ ಇತಿಹಾಸ ಪ್ರಸಿದ್ಧ ಬೋರನಕಣಿವೆ ಜಲಾಶಯಕ್ಕೆ ಸೇರುತ್ತದೆ. ಈ ನೀರು ಹುಳಿಯಾರು ಪಟ್ಟಣದ ನಿವಾಸಿಗಳಿಗೆ ಕುಡಿಯಲು ಕೊಡಲಾಗುತ್ತದೆ. ಕಸದ ಘಟಕ ನಿರ್ಮಿಸಿದರೆ ತ್ಯಾಜ್ಯದ ನೀರು ಹಳ್ಳಗಳ ಮೂಲಕ ಬೋರನಕಣಿವೆಗೆ ಸೇರಿ ನೀರು ಸೇರಿ ಕಲುಶಿತವಾಗುತ್ತದೆ. ಬಹುಮುಖ್ಯವಾಗಿ ಕಸದಿಂದ ಈ ಭಾಗದಲ್ಲಿ ರೋಗರುಜಿನಗಳು ಹೆಚ್ಚಾಗುತ್ತವೆ. ಹಾಗಾಗಿ ಹುಳಿಯಾರಿನಲ್ಲೇ ಕಸದ ಘಟಕ ಮಾಡಿಕೊಳ್ಳಲಿ.

# 5 ವರ್ಷದ ಒಳಗಿನ ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕಿಸಿ

ಹುಳಿಯಾರು: ಜನಿಸಿದ ಮಗುವಿನಿಂದ ಐದು ವರ್ಷಗಳ ವಯೋಮಾನದ ಮಕ್ಕಳಿಗೆ ಕಡ್ಡಾಯವಾಗಿ ಪಲ್ಸ್ ಪೋಲಿಯೋ ಹನಿ ಹಾಕಿಸಿ ಜೀವನಪರ್ಯಂತ ಮಾರಕ ರೋಗಗಳಿಂದ ರಕ್ಷಿಸಬೇಕೆಂದು ಹುಳಿಯಾರು ಹೋಬಳಿಯ ದಸೂಡಿ ಗ್ರಾಪಂ ಸದಸ್ಯ ಹಾಗೂ ಲೇಖಕ ಕೆ.ಮರಿಯಪ್ಪ ಮನವಿ ಮಾಡಿದರು.

ದಸೂಡಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಆಯೋಜಿಸಲಾದ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ತಾಯಿ ತನ್ನ ಮಗುವಿಗೆ ಪಲ್ಸ್ ಪೊಲಿಯೋ ಹನಿ ಹಾಕಿಸುವಲ್ಲಿ ವಿಫಲವಾದರೆ ಮಗುವಿನ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಜೀವಿತಾವಧಿಯುದ್ದಕ್ಕೂ ಪೊಲಿಯೋ ರೋಗದ ವಿರುದ್ಧ ರಕ್ಷಣೆ ಪಡೆಯಲು ಪಲ್ಸ್ ಪೊಲಿಯೋ ಹನಿ ಹಾಕಿಸುವುದು ಕಡ್ಡಾಯ. ಹಾಗಾಗಿ ಡಿ.22 ರಿಂದ 24 ರ ವರೆಗೆ ಮನೆ ಮನೆಗೆ ಭೇಟಿ ನೀಡಿ ಲಸಿಕೆ ಹಾಕಲಾಗುವುದಿದ್ದು ತಪ್ಪದೆ ಲಸಿಕೆ ಹಾಕಿಸಿ ಎಂದರು.



ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಂಜುಳಾ ಚನ್ನಪ್ಪನವರು ಮಾತನಾಡಿ ಸರ್ಕಾರ ಹಮ್ಮಿಕೊಂಡಿರುವ ಯೋಜನೆಯನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕೆಂದು ವಿನಂತಿಸಿದರು.

ದಸೂಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ವರುಣ್, ಆರೋಗ್ಯ ನಿರೀಕ್ಷಕ ಚಿರಂಜೀವಿ, ಆಶಾ ಕಾರ್ಯಕರ್ತೆಯರಾದ ಲಕ್ಷ್ಮೀದೇವಿ, ಉಮಾದೇವಿ, ಶಾರದ ಹಾಗೂ ನರ್ಸ್‌ಗಳಾದ ಶೋಭಾ, ನೇತ್ರ, ಸಾವಿತ್ರಿ, ಗ್ರಾಮಸ್ಥರಾದ ಚೆನ್ನಪ್ಪ, ರಂಗಸ್ವಾಮಿ ಸೇರಿದಂತೆ ಅನೇಕರು ಇದ್ದರು.

# ವ್ಯಕ್ತಿತ್ವದಿಂದ ಸ್ಥಾನಕ್ಕೆ ಗೌರವ ತಂದ ಅಧಿಕಾರಿ ನಾಗರಾಜು: ಜಿ.ಪ್ರಭು

## ಲೆಕ್ಕ ಇಲಾಖೆ ಅಧಿಕಾರಿಗಳ ಸಂಘದಿಂದ ದಿ.ನಾಗರಾಜುಗೆ ನುಡಿ ನಮನ

**ತುಮಕೂರು:** ಸಾರ್ವಜನಿಕ ಸೇವೆಯಲ್ಲಿ ಹುದ್ದೆಯಿಂದ ವ್ಯಕ್ತಿಗೆ ಗೌರವ ದೊರೆಯುತ್ತದೆ, ಕೆಲವು ವ್ಯಕ್ತಿಗಳಿಂದ ಆ ಹುದ್ದೆಯ ಗೌರವ ಜಾಸ್ತಿಯಾಗುತ್ತದೆ. ತಮ್ಮ ಉತ್ತಮ ವ್ಯಕ್ತಿತ್ವದ ಮೂಲಕ ತಾವು ನಿರ್ವಹಿಸುತ್ತಿದ್ದ ಹುದ್ದೆಯ ಗೌರವ ಹೆಚ್ಚಿಸಿದ ಅಪರೂಪದ ಅಧಿಕಾರಿ ಲೆಕ್ಕ ಪರಿಶೋಧನಾಧಿಕಾರಿ ಎ.ಎನ್.ನಾಗರಾಜು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ.ಪ್ರಭು ಹೇಳಿದರು.

ತುಮಕೂರು ಜಿಲ್ಲಾ ಪಂಚಾಯಿತಿಯಲ್ಲಿ ಲೆಕ್ಕ ಅಧೀಕ್ಷಕರಾಗಿ ಸೇವೆ ಸಲ್ಲಿಸಿ, ಪದೋನ್ನತಿ ಪಡೆದು ಬೆಂಗಳೂರು ಕಚೇರಿಯಲ್ಲಿ ಲೆಕ್ಕ ಪರಿಶೋಧನಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದ ಎ.ಎನ್.ನಾಗರಾಜು ಅವರು ಕಳೆದ ತಿಂಗಳು ನಗರದಲ್ಲಿ ರಸ್ತೆ ಅಪಘಾತದಲ್ಲಿ ಅಕಾಲಿಕ ಮರಣಕ್ಕೀಡಾದರು. ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಇಲಾಖೆ ಅಧಿಕಾರಿಗಳು ಹಾಗೂ ನೌಕರರ ಸಂಘದೊಂದಿಗೆ ಜಿಲ್ಲಾ ಜಿಲ್ಲಾ ಶಾಖೆಯಿಂದ ಶನಿವಾರ ಸಂಜೆ ನಗರದ ಕನ್ನಡ ಭವನದಲ್ಲಿ ನಡೆದ ಜ್ಞಾನದೀಪ ಎ.ಎನ್.ನಾಗರಾಜು ಪುಣ್ಯಸ್ಮರಣಾರ್ಥ ಹಮ್ಮಿಕೊಂಡಿದ್ದ ನುಡಿನಮನ ಕಾರ್ಯಕ್ರಮದಲ್ಲಿ ಅಗಲಿದ ಅಧಿಕಾರಿ ನಾಗರಾಜು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಇಲಾಖೆಯ ಸಾರ್ವಜನಿಕ ಸೇವೆಯಲ್ಲಿ ತಮ್ಮ ವಿದ್ವತ್, ಜ್ಞಾನ, ಕಾರ್ಯಕೌಶಲ್ಯದ ಮೂಲಕ ಶಿಸ್ತುಬದ್ಧ ಸೇವೆ ಮಾಡುತ್ತಿದ್ದ ಎ.ಎನ್.ನಾಗರಾಜು ಅವರ ಅಗಲಿಗೆ ಇಲಾಖೆಗೆ ನಷ್ಟ ಉಂಟುಮಾಡಿದೆ. ಸಾರ್ವಜನಿಕ ಸೇವೆಯಲ್ಲಿರುವವರಿಗೆ ಕಾರ್ಯನಿರ್ವಹಿಸುತ್ತಿರುವ ಸ್ಥಾನ ಅವರಿಗೆ ಗೌರವ ತಂದುಕೊಡಬಹುದು, ಆದರೆ ನಾಗರಾಜು ಅವರು ತಮ್ಮ ಉತ್ತಮ ಸೇವೆ, ಕಾರ್ಯನಿಷ್ಠೆ, ವ್ಯಕ್ತಿತ್ವದಿಂದಾಗಿಯೇ ತಮ್ಮ ಸ್ಥಾನಕ್ಕೆ ಗೌರವ ತಂದುಕೊಟ್ಟಿದ್ದಾರೆ ಎಂದು ಅವರ ಸೇವೆ ಸ್ಮರಿಸಿದರು. ಮಹಾತ್ಮ ಗಾಂಧಿ ಕೂಡಾ ಯಾವುದೇ ಸ್ಥಾನಮಾನ ಪಡೆಯದೆ ತಮ್ಮ ಕಾರ್ಯವೈಖರಿಯಿಂದಲೇ ಗೌರವದ ಸ್ಥಾನ ಪಡೆದಿದ್ದಾರೆ. 1924ರಲ್ಲಿ ಬೆಳಗಾವಿಯ ಕಾಂಗ್ರೆಸ್ ಅಧಿವೇಶನದಲ್ಲಿ ಅಧ್ಯಕ್ಷತೆವಹಿಸಿದ್ದು ಬಿಟ್ಟರೆ ಗಾಂಧೀಜಿ ಇನ್ಯಾವುದೇ ಸ್ಥಾನ, ಹುದ್ದೆ ಪಡೆದಿರಲಿಲ್ಲ. ಆದರೆ ಅವರ ಸ್ವಾತಂತ್ರ್ಯ ಹೋರಾಟ, ಸತ್ಯ, ಅಹಿಂಸೆ ಪ್ರತಿಪಾಧನೆ, ಸರಳ ಬದುಕಿನಿಂದಾಗಿ ಮಹಾತ್ಮರೆಂದು ದೇಶವೇ ಗೌರವಿಸುತ್ತಿದೆ. ನಾಗರಾಜು ಕೂಡಾ ತಮ್ಮ ಉತ್ತಮ ವ್ಯಕ್ತಿತ್ವದಿಂದ ಗೌರವ ಸಂಪಾದಿಸಿ, ಯುವ ಅಧಿಕಾರಿಗಳಿಗೆ ಸಾರ್ವಜನಿಕ ಸೇವೆ ನಿರ್ವಹಣೆ ಬಗ್ಗೆ ಆದರ್ಶಗಳನ್ನು ಬಿಟ್ಟುಹೋಗಿದ್ದಾರೆ ಎಂದು ಜಿ.ಪ್ರಭು ಹೇಳಿದರು.



ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಪ್ರಧಾನ ನಿರ್ದೇಶಕರಾದ ಎಸ್.ಎಂ.ರಾಮ್‌ಪ್ರಸಾದ್ ಮಾತನಾಡಿ, ಇಲಾಖೆ ಸಂಬಂಧಿಸಿದಂತೆ ಆಳವಾದ ಜ್ಞಾನ, ಉತ್ತಮ ಕಾರ್ಯಶೀಲತೆ ಹೊಂದಿದ್ದ ನಾಗರಾಜು ಅವರು, ಕಚೇರಿ ಆಡಳಿತವನ್ನು ಶಿಸ್ತಿನಿಂದ ಸುವ್ಯವಸ್ಥಿತವಾಗಿ ನಿರ್ವಹಿಸಿಕೊಂಡುಹೋಗುತ್ತಿದ್ದರು. ಮಾದರಿ ಅಧಿಕಾರಿಯಾಗಿ ಬಹಳಷ್ಟು ಆದರ್ಶಗಳನ್ನು ಬಿಟ್ಟುಹೋಗಿದ್ದಾರೆ ಎಂದು ಹೇಳಿದರು.

ಸಾವು ಯಾವತ್ತೂ ನೋವನ್ನು ಉಂಟುಮಾಡುತ್ತದೆ. ನಾಗರಾಜು ಅವರು ಅಗಲಿಕೆಯಿಂದ ಉತ್ತಮ ಅಧಿಕಾರಿ ಕಳೆದುಕೊಂಡಿದ್ದೇವೆ. ಅವರ ಕುಟುಂಬದವರಿಗೂ ಅಪಾರ ನೋವಾಗಿದೆ. ಅವರ ಕುಟುಂಬದ ಜೊತೆ ಲೆಕ್ಕಪತ್ರ ಅಧಿಕಾರಿಗಳ ಸಂಘ ಹಾಗೂ ನಾವೆಲ್ಲಾ ಅಧಿಕಾರಿಗಳು ಇರುತ್ತೇವೆ ಎಂದು ತಿಳಿಸಿ ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿದರು.

ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕ ಇಲಾಖೆ ಅಧಿಕಾರಿಗಳು ಹಾಗೂ ನೌಕರರ ಸಂಘದ ಮಾಜಿ ಅಧ್ಯಕ್ಷರು, ರಾಜ್ಯ ಸರ್ಕಾರದ ಆರ್ಥಿಕ ಇಲಾಖೆಯ ಪದನಿಮಿತ್ತ ಜಂಟಿ ಕಾರ್ಯದರ್ಶಿ ಕೃಷ್ಣ ಎನ್. ಬುಗಟ್ಯಾಗೋಳ್ ಮಾತನಾಡಿ, ಎ.ಎನ್.ನಾಗರಾಜು ಅವರು ಇಲಾಖೆಯ ಶಿಸ್ತುಬದ್ಧ ಅಧಿಕಾರಿಯಾಗಿದ್ದರು. ವಿನಯವಿನಯದ ನಡವಳಿಕೆಯಿಂದ ಎಲ್ಲರ ಮೆಚ್ಚಿನ ವ್ಯಕ್ತಿಯಾಗಿದ್ದರು. ನಾಗರಾಜು ಅವರು ಕುಟುಂಬದ ಜೊತೆ ನಾವೆಲ್ಲಾ ಇದ್ದೇವೆ. ಅವರ ಮಗನ ಶಿಕ್ಷಣಕ್ಕಾಗಿ ಸಂಘ ಹಾಗೂ ಲೆಕ್ಕ ಇಲಾಖೆ ಅಧಿಕಾರಿಗಳು ಸೇರಿ 2 ಲಕ್ಷ ರೂ. ಹಣ ಠೇವಣಿ ಇಡುವುದಾಗಿ ಪ್ರಕಟಿಸಿದರು.

ಸಂಘದ ಜಿಲ್ಲಾಧ್ಯಕ್ಷರೂ ಆದ ಜಿಲ್ಲಾ ಪಂಚಾಯಿತಿ ಮುಖ್ಯ ಲೆಕ್ಕಾಧಿಕಾರಿ ನರಸಿಂಹಮೂರ್ತಿ ಪ್ರಸ್ತಾವಿಕ ನುಡಿ ನುಡಿಯುತ್ತಾ ನಾಗರಾಜು ಅವರೊಂದಿಗಿನ ಒಡನಾಟವನ್ನು ಸ್ಮರಿಸಿಕೊಂಡರು. ವಿವಿಧ ಜಿಲ್ಲೆಗಳಲ್ಲಿ ಒಟ್ಟಾಗಿ ಕೆಲಸ ಮಾಡಿದ್ದಲ್ಲದೆ, ಇಲಾಖೆಯಿಂದ ಆಯೋಜಿಸುತ್ತಿದ್ದ ಕಾರ್ಯಕ್ರಮಗಳಲ್ಲಿ ಒಳ್ಳೆಯ ವಿಚಾರಣಗಳನ್ನು ಮಂಡಿಸುತ್ತಿದ್ದರು. ನಾಗರಾಜು ಒಂದು ರೀತಿಯಲ್ಲಿ ವಿಕಿಪೀಡಿಯಾ ಇದ್ದಂತೆ, ಆಡಳಿತ ವ್ಯವಸ್ಥೆಯಲ್ಲಿ ಎದುರಾಗುತ್ತಿದ್ದ ಅನೇಕ ಸಮಸ್ಯೆಗಳಿಗೆ ಪರಿಹಾರ ಸೂಚಿಸುತ್ತಿದ್ದರು ಎಂದು ಹೇಳಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಉಪ ಕಾರ್ಯದರ್ಶಿ ಹೆಚ್.ಬಿ.ಪಾರ್ವತಿ, ನಿವೃತ್ತ ಪ್ರಧಾನ ನಿರ್ದೇಶಕ ಡಿ.ಆರ್.ರಾಮಚಂದ್ರಯ್ಯ ಸೇರಿದಂತೆ ವಿವಿಧ ಅಧಿಕಾರಿ, ನೌಕರರು, ನಾಗರಾಜು ಅವರ ಕುಟುಂಬದವರು ಹಾಜರಿದ್ದು ಶ್ರದ್ಧಾಂಜಲಿ ಸಲ್ಲಿಸಿದರು. ಕಾರ್ಯಕ್ರಮಕ್ಕೆ ಮೊದಲು ದಿಬ್ಬೂರು ಮಂಜುನಾಥ್ ಮತ್ತು ತಂಡದವರಿಂದ ಭಕ್ತಿಗೀತೆಗಳ ಗಾಯನ ಕಾರ್ಯಕ್ರಮ ವ್ಯವಸ್ಥೆ ಮಾಡಲಾಗಿತ್ತು.

# ಡೇಟಾ ನಿರ್ವಹಣಾ ಕೌಶಲ್ಯಗಳನ್ನು ಹೆಚ್ಚಿಸಲು ತರಬೇತಿ ಪಡೆದುಕೊಳ್ಳುವಂತೆ ಸಲಹೆ



**ತುಮಕೂರು:** ವಿಜ್ಞಾನ ಮತ್ತು ಸಂಶೋಧನಾ ಕ್ಷೇತ್ರದಲ್ಲಿ ವ್ಯಾಪಕವಾಗಿ ಬಳಸಲಾಗುವ ಸಂಖ್ಯಾಶಾಸ್ತ್ರೀಯ ಕಂಪ್ಯೂಟಿಂಗ್, ದತ್ತಾಂಶ ವಿಶ್ಲೇಷಣೆ ಮತ್ತು ದತ್ತಾಂಶ ದೃಶ್ಯೀಕರಣಕ್ಕಾಗಿ ನಿರ್ದಿಷ್ಟವಾಗಿ ವಿನ್ಯಾಸಗೊಳಿಸಲಾದ ಉಚಿತ, ಮುಕ್ತ-ಮೂಲ ಪ್ರೋಗ್ರಾಮಿಂಗ್ ಭಾಷೆ ಮತ್ತು ಸಾಫ್ಟ್‌ವೇರ್ ಅಧ್ಯಯನ ಕುರಿತಂತೆ ಆರು ದಿನ ಕಾರ್ಯಾಗಾರವನ್ನು ನಗರದ ಶ್ರೀ ಸಿದ್ದಾರ್ಥ ಇಂಜಿನಿಯರಿಂಗ್ ಕಾಲೇಜಿನ ಎಂಬಿಎ ವಿಭಾಗದಲ್ಲಿ ಯಶಸ್ವಿಯಾಗಿ ನಡೆಸಲಾಯಿತು.

ನಗರದ ಕ್ಯಾಂಪಸ್‌ನ ಜಿಪಿ ನೆಕ್ಸೆಸ್ ಸಭಾಂಗಣದಲ್ಲಿ ಎಂಬಿಎ ಮೂರನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಳ್ಳಲಾಗಿದ್ದ "ಆರ್ ಪ್ರೋಗ್ರಾಮಿಂಗ್" ಮೌಲ್ಯವರ್ಧಿತ ಕೋರ್ಸ್ ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಯಾಗಿ ನವದೆಹಲಿಯ ಜೊಮಾಟೊ ಲಿಮಿಟೆಡ್‌ನ ವಂಚನೆ ಮತ್ತು ತನಿಖಾ ವಿಭಾಗದ ಸಂಯೋಜಕರಾದ ಕೇಶವ್ ಕೌಶಿಕ್ ಅವರು ಭಾಗವಹಿಸಿ, ಉಪನ್ಯಾಸ ನೀಡಿದರು.

ಸಂಪನ್ಮೂಲ ವ್ಯಕ್ತಿ ನೈಜ-ಪ್ರಪಂಚದ ವ್ಯವಹಾರನಿರ್ಧಾರತೆಗೆದುಕೊಳ್ಳುವಿಕೆಯಲ್ಲಿ ಆರ್ ಪ್ರೋಗ್ರಾಮಿಂಗ್‌ನ ಪ್ರಾಯೋಗಿಕ ಅನ್ವಯದ ಬಗ್ಗೆ ಅಮೂಲ್ಯವಾದ ಒಳನೋಟಗಳನ್ನು ಒದಗಿಸಿದ ಅವರು ಉದ್ಯಮ ಹಿನ್ನೆಲೆಯೊಂದಿಗೆ, ಇಂದಿನ ದತ್ತಾಂಶ ಆಧಾರಿತ ವ್ಯವಹಾರ ಕ್ಷೇತ್ರದಲ್ಲಿನ ಅಗತ್ಯವಾದ ವಿಶ್ಲೇಷಣಾತ್ಮಕ ಮತ್ತು ಡೇಟಾ ನಿರ್ವಹಣಾ ಕೌಶಲ್ಯಗಳನ್ನು ಹೆಚ್ಚಿಸುವಲ್ಲಿ ತರಬೇತಿಗಳನ್ನು ಪಡೆದುಕೊಳ್ಳುವಂತೆ ಸಲಹೆ ನೀಡಿದರು.

ಡೇಟಾ ಪ್ರಕಾರಗಳು, ಡೇಟಾ ರಚನೆಗಳು, ಡೇಟಾ ದೃಶ್ಯೀಕರಣ, ಮೂಲ ಅಂಕಿಅಂಶಗಳ ವಿಶ್ಲೇಷಣೆ ಮತ್ತು ಸಾಫ್ಟ್‌ವೇರ್ ಬಳಸುವ ಪ್ರಾಯೋಗಿಕ ಅಭ್ಯಾಸಗಳು ಇಂದಿನ ವ್ಯವಹಾರ ನಿರ್ವಹಣಾ ಕ್ಷೇತ್ರದಲ್ಲಿನ ಪ್ರಾಮುಖ್ಯತೆಗಳಾಗಿವೆ ಎಂದು ವಿವರಿಸಿದ ಕೇಶವ್ ಕೌಶಿಕ್, ನಿರ್ವಹಣಾ ಮತ್ತು ವ್ಯವಹಾರ-ಸಂಬಂಧಿತ ಸಮಸ್ಯೆಗಳನ್ನು ಪರಿಹರಿಸಲು ಆರ್ ಪ್ರೋಗ್ರಾಮಿಂಗ್ ತಂತ್ರಗಳನ್ನು ಅನ್ವಯಿಸುವುದರ ಮೇಲೆ ಒತ್ತು ನೀಡುವಂತೆ ವಿದ್ಯಾಥಿಗಳಿಗೆ ಸಲಹೆ ನೀಡಿದರು.

ಶ್ರೀ ಸಿದ್ಧಾರ್ಥ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಎಂ ಎಸ್ ರವಿಪ್ರಕಾಶ ಅವರು ಮಾತನಾಡಿ, ಕಾರ್ಯಾಗಾರವು ಶೈಕ್ಷಣಿಕ ಕಲಿಕೆ ಮತ್ತು ಪ್ರಾಯೋಗಿಕ ಅನ್ವಯದ ನಡುವಿನ ಅಂತರವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ನಿರ್ವಹಣಾ ಕ್ಷೇತ್ರದ ಸಂಶೋಧನಾ ಅಧ್ಯಯನಗಳಿಗೆ ಸಂಬಂಧಿಸಿದ ದತ್ತಾಂಶ ವಿಶ್ಲೇಷಣೆ ಮತ್ತು ತಂತ್ರಾಂಶ ಬಳಕೆ ಬಗ್ಗೆ ವಿದ್ಯಾರ್ಥಿಗಳಿಗೆ ಗ್ರಹಿಕೆ ಸಾಮಾರ್ಥ್ಯವನ್ನು ಹೆಚ್ಚಿಸಿಕೊಳ್ಳಲು ಕಾರ್ಯಾಗಾರದಿಮದ ಸಹಾಯವಾಗುತ್ತದೆ ಎಂದರು.

ಕಾರ್ಯಾಗಾರದಲ್ಲಿ ಎಂಬಿಎ ವಿಭಾಗದ ಮುಖ್ಯಸ್ಥರು ಮತ್ತು ಸಹ ಪ್ರಾಧ್ಯಾಪಕರಾದ ಡಾ.ಎಂ.ಸಿ.ರೂಪ, ಸಹಾಯಕ ಪ್ರಾಧ್ಯಾಪಕರುಗಳಾದ ಡಾ.ಶ್ವೇತಾ ಜಿ.ಆರ್., ಬುಡಗಿರಿ ವಿದ್ಯಾವತಿ, ಮನು.ಸಿ, ಸುರೇಶ ಪಾಟೀಲ, ಚಂದ್ರಕಾಂತ.ಎಸ್ ಮತ್ತು ತಾಂತ್ರಿಕ ನಿರ್ವಹಣೆಗಾರರಾದ ನರಹರಿ ಅವರುಗಳು ಹಾಜರಿದ್ದರು.ಸಂಪನ್ಮೂಲ ವ್ಯಕ್ತಿ ಅಳವಡಿಸಿಕೊಂಡ ಉದ್ಯಮ-ಆಧಾರಿತ ವಿಧಾನಗಳು ಕಾರ್ಯಾಗಾರದಲ್ಲಿ ಪಾಲ್ಗೊಂಡ ಎಂಬಿಎ ವಿದ್ಯಾರ್ಥಿಗಳ ಮೆಚ್ಚಿಗೆಗೆ ಪಾತ್ರವಾಯಿತು.

# ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ಸಾಮಾಜಿಕ ಜಾಲತಾಣ ಕಾರ್ಯಾಗಾರದ ಸಭೆಯನ್ನು ಆಯೋಜನೆ ಮಾಡಲಾಗಿತ್ತು.

ಗುಬ್ಬಿ:ರಾಜ್ಯದಲ್ಲಿ ಜೆಡಿಎಸ್ ಪಕ್ಷವು ಹಮ್ಮಿಕೊಳ್ಳುವ ಕಾರ್ಯಕ್ರಮ ಹಾಗೂ ಯೋಜನೆಗಳ ಬಗ್ಗೆ ಮಾಹಿತಿಯನ್ನು ಸಾಮಾಜಿಕ ಜಾಲತಾಣದ ಮೂಲಕ ತಾಲೂಕಿನ ಜನರಿಗೆ ತಿಳಿಸುವ ಕಾರ್ಯಾಗಾರವನ್ನು ಮಾಡಲಾಗುವುದು ಎಂದು ಜೆಡಿಎಸ್ ಸಾಮಾಜಿಕ ಜಾಲತಾಣ ಕಾರ್ಯಾಗಾರದ ರಾಜ್ಯಾಧ್ಯಕ್ಷ ಚಂದನ್ ತಿಳಿಸಿದರು.

ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ಆಯೋಜಿಸಲಾಗಿದ ಜೆಡಿಎಸ್ ಯುವ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು,ಪ್ರಾರಂಭದಲ್ಲಿ ಸುಮಾರು ನೂರು ವಿಧಾನ ಸಭಾ ಕ್ಷೇತ್ರದಲ್ಲಿ ಈ ಕಾರ್ಯಾಗಾರವನ್ನು ಅಯೋಜನೆ ಮಾಡಲಾಗಿದ್ದು, ಅದರಲ್ಲಿ ಗುಬ್ಬಿ ಕ್ಷೇತ್ರವು ಒಂದಾಗಿದೆ. ರಾಜ್ಯದಲ್ಲಿ ಜೆಡಿಎಸ್ ಪಕ್ಷ ಸಂಘಟನೆಯ ಮೂಲಕ ಮಾನ್ಯ ಕುಮಾರಸ್ವಾಮಿ ಅವರು ಮಾಡುತ್ತಿರುವ ಅಭಿವೃದ್ಧಿ ಕೆಲಸಗಳ ಬಗ್ಗೆ ತಾಲೂಕಿನ ಜನತೆಗೆ ತಿಳಿಸಲಾಗುವುದು ಎಂದರು. ಜೆಡಿಎಸ್ ಜಿಲ್ಲಾಧ್ಯಕ್ಷ ಆರ್ ಸಿ ಅಂಜಿನಪ್ಪ ಮಾತನಾಡಿ, ಎಚ್ ಡಿ ಕುಮಾರಸ್ವಾಮಿ ಅವರು ಕೇಂದ್ರ ಸಚಿವರಾದ ಮೇಲೆ ದೇಶಾದ್ಯಂತ ಪ್ರವಾಸ ಮಾಡಿ ಹಲವು ಕಾರ್ಖಾನೆಗಳನ್ನು ಪುನಶ್ಚೇತನ ಗೊಳಿಸುತ್ತಿದ್ದು ಅದರಲ್ಲಿ ನಮ್ಮ ರಾಜ್ಯದ ಭದ್ರಾವತಿಯ ಉಕ್ಕಿನ ಕೈಗಾರಿಕೆಯನ್ನು ಆರಂಭ ಮಾಡಿರುವುದು ಸಂತಸ ತಂದಿದೆ. ರಾಜ್ಯದಲ್ಲಿ ಜೆಡಿಎಸ್ ಪಕ್ಷವನ್ನು ಸಂಘಟನೆ ಮಾಡುವುದರ ಮೂಲಕ ಅತಿ ಹೆಚ್ಚು ಕ್ಷೇತ್ರಗಳಲ್ಲಿ ಗೆಲುವನ್ನು ಸಾಧಿಸಿ ಮುಂದಿನ ಅವಧಿಗೆ ಕುಮಾರಸ್ವಾಮಿಯವರನ್ನು ಮುಖ್ಯಮಂತ್ರಿಯನ್ನಾಗಿ ನೋಡುವುದೇ ನಮ್ಮ ಗುರಿಯಾಗಿದೆ ಈ ಸಾಮಾಜಿಕ ಜಾಲತಾಣ ಕಾರ್ಯಕ್ರಮ ಮೂಲಕ ಬೂತ್ ಮಟ್ಟದಲ್ಲಿ ಕಾರ್ಯಕರ್ತರನ್ನ ಒಟ್ಟುಗೂಡಿಸಿಕೊಂಡು ಸಂಘಟನೆ ಮಾಡಲಾಗುವುದು ಎಂದರು.ಜೆಡಿಎಸ್ ಮುಖಂಡ ಬಿ ಎಸ್ ನಾಗರಾಜು ಮಾತನಾಡಿ, ಗುಬ್ಬಿ ಕ್ಷೇತ್ರದಲ್ಲಿ ಕಳೆದ 25 ವರ್ಷಗಳಿಂದ ಯಾವುದೇ ಶಾಶ್ವತವಾದ ಅಭಿವೃದ್ಧಿ ಕೆಲಸ ನಡೆದಿಲ್ಲ ಇದರಿಂದ ಕ್ಷೇತ್ರದ ಜನರು ಉತ್ತಮ ಸೌಲಭ್ಯಗಳನ್ನ ಪಡೆದುಕೊಳ್ಳುವುದಕ್ಕೆ ಸಾಧ್ಯವಾಗಿಲ್ಲ ಪ್ರಸ್ತುತ ರಾಜ್ಯ ಕಾಂಗ್ರೆಸ್ ಪಕ್ಷದಲ್ಲಿ ಸೇಮ್ ಕುರುಚಿಗಾಗಿ ಪರಸ್ಪರ ಪೈಪೋಟಿ ನಡೆಯುತ್ತಿದ್ದು ಈ ಸರ್ಕಾರದಿಂದ ಕ್ಷೇತ್ರದ ಅಭಿವೃದ್ಧಿಯನ್ನು ಕಾಣಲು ಕಷ್ಟ ಸಾಧ್ಯವಾಗಿದೆ. ಆಡಳಿತ ಸರ್ಕಾರದ ಲೋಪ ದೋಷಗಳನ್ನು ನಮ್ಮ ಸಾಮಾಜಿಕ ಜಾಲತಾಣ ಕಾರ್ಯಗಾರದ ಮೂಲಕ ಕ್ಷೇತ್ರದ ಜನರಿಗೆ ಮನವರಿಕೆ ಮಾಡಿಕೊಡಲಾಗುವುದು. ಕಳೆದ ವಿಧಾನಸಭೆ ಚುನಾವಣೆಯಲ್ಲಿ ಜೆಡಿಎಸ್ ಪಕ್ಷಕ್ಕೆ ಸುಮಾರು 43,000 ಮತಗಳನ್ನು ನೀಡಿರುವ ಜನತೆಯ ಜೊತೆಗೆ ಮತ್ತಷ್ಟು ಯುವ ಸಮೂಹವನ್ನು ನಮ್ಮ ಜೆಡಿಎಸ್ ಪಕ್ಷಕ್ಕೆ ಸದಸ್ಯತ್ವ ಅಭಿಯಾನದ ಮೂಲಕ ಸುಮಾರು 25 ಸಾವಿರಕ್ಕೂ ಹೆಚ್ಚು ಸದಸ್ಯತ್ವವನ್ನು ನೀಡುವ ಗುರಿಯನ್ನು ಹೊಂದಲಾಗಿದೆ ಎಂದರು. ಎ ಪಿ ಎಂ ಸಿ ಮಾಜಿ ಅಧ್ಯಕ್ಷ ಕಳ್ಳಿಪಾಳ್ಯ ಲೋಕೇಶ್ ಮಾತನಾಡಿ, ಜೆಡಿಎಸ್ ಪಕ್ಷದಲ್ಲಿ ಈ ಕಾರ್ಯಕ್ರಮವು ಒಂದು ವಿನೂತನವಾಗಿದ್ದು ಪಕ್ಷ ಸಂಘಟನೆಯನ್ನು ಮಾಡಲು ಬಹಳ ಸಹಕಾರಿಯಾಗಿದೆ ಈ ಸೌಲಭ್ಯವನ್ನು ಕಾರ್ಯಕರ್ತರು ಮುಖಂಡರುಗಳು ಯಶಸ್ವಿಯಾಗಿ ಬಳಸಿಕೊಂಡು ಕ್ಷೇತ್ರದ ಎಲ್ಲಾ ಜನರಿಗೂ ಜೆಡಿಎಸ್ ಪಕ್ಷದ ಕಾರ್ಯಕ್ರಮಗಳನ್ನ ಹಾಗೂ ಯೋಜನೆಗಳನ್ನು ತಲುಪಿಸುವ ನಿಟ್ಟಿನಲ್ಲಿ ಯುವ ಸಮೂಹವನ್ನ ಸಂಘಟಿತರನ್ನಾಗಿ ಮಾಡುವ ಗುರಿಯನ್ನು ಹೊಂದಿದೆ ಎಂದರು. ಈ ಸಂದರ್ಭದಲ್ಲಿ ಜೆಡಿಎಸ್ ವಕೀಲರ ಸಂಘದ ಅಧ್ಯಕ್ಷೆ ರೇಖಾ,ಮುಖಂಡರಾದ ಯೋಗಾನಂದ ಕುಮಾರ್,ವಕೀಲ ಶಿವಣ್ಣ, ಎಂ ಎಚ್ ಪಟ್ಟಣ ಲಕ್ಷ್ಮಿಕಾಂತ್,ದಿನೇಶ್, ಕಂಠಿ, ಕೆಂಪರಾಜು,ಸೇರಿದಂತೆ ಹಲವು ಯುವ ಕಾರ್ಯಕರ್ತರು ಭಾಗವಹಿಸಿದ್ದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA . SUB EDITOR- A.S.BANUPRAKASH CONTACT : 9901010109 GMAIL: suryapragathi2021@gmail.com.